# ಮೀನುಗಾರಿಕೆ ಇಲಾಖೆ

## ವಾರ್ಷಿಕ ವರದಿ 2016–17

1.1 ಮೀನುಗಾರಿಕೆಯು ಪೌಷ್ಠಿಕ ಆಹಾರ, ವಿದೇಶಿ ವಿನಿಮಯ ಹಾಗೂ ಉದ್ಯೋಗಾವಕಾಶದ ಸೃಷ್ಠಿಯ ಮೂಲವಾಗಿರುವುದರಿಂದ ರಾಜ್ಯದ ಹಾಗೂ ದೇಶದ ಆರ್ಥಿಕ ಪ್ರಗತಿಯಲ್ಲಿ ಪ್ರಮುಖ ಸ್ಥಾನವನ್ನು ಹೊಂದಿದೆ.

1.2 ಕರ್ನಾಟಕ ರಾಜ್ಯವು 2.93 ಲಕ್ಷ ಹೆಕ್ಟೇರ್ ಜಲ ವಿಸ್ತೀರ್ಣವುಳ್ಳ ಕೆರೆ, ಕೊಳಗಳನ್ನು ಮತ್ತು 2.72 ಲಕ್ಷ ಹೆಕ್ಟೇರ್ ವಿಸ್ತೀರ್ಣವುಳ್ಳ ಜಲಾಶಯಗಳನ್ನೊಳಗೊಂಡು ಒಟ್ಟು 5.65 ಲಕ್ಷ ಹೆಕ್ಟೇರಿನಷ್ಟು ಒಳನಾಡು ಜಲ ಸಂಪನ್ಮೂಲವನ್ನು ಹೊಂದಿದೆ. ಇದರ ಜೊತೆಗೆ 8000 ಹೆಕ್ಟೇರಿನಷ್ಟು ಹಿನ್ನೀರು ಪ್ರದೇಶ, 320 ಕಿ.ಮೀ. ಉದ್ದದ ಕರಾವಳಿ ತೀರ ಪ್ರದೇಶ ಹಾಗೂ 27,000 ಚ. ಕಿ.ಮೀ. ವಿಸ್ತೀರ್ಣದ ವಿಶಾಲವಾದ ಭೂಖಂಡ ಪ್ರದೇಶವನ್ನು ಹೊಂದಿದ್ದು, ಮೀನುಗಾರಿಕೆಯ ಅಭಿವೃದ್ಧಿಗೆ ವಿಫುಲ ಅವಕಾಶ ಹೊಂದಿರುತ್ತದೆ.

1.3 2016–17 ನೇ ಸಾಲಿನಲ್ಲಿ ಕಡಲ ಮೀನು ಉತ್ಪಾದನೆಯು 3.99 ಲಕ್ಷ ಮೆಟ್ರಿಕ್ ಟನ್‌ಗಳಷ್ಟಾಗಿರುತ್ತದೆ. ಕಡಲ ಮೀನುಗಾರಿಕೆಯ ಕಾರ್ಯಾಚರಣೆಯಲ್ಲಿ 4277 ಯಾಂತ್ರೀಕೃತ ದೋಣಿಗಳು, 7831 ಮೋಟರೀಕೃತ ದೋಣಿಗಳು ಮತ್ತು 8759 ನಾಡ ದೋಣಿಗಳಿವೆ. ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ರಾಜ್ಯದ ಒಟ್ಟು ಕಡಲ ಮೀನು ಉತ್ಪಾದನೆಯಲ್ಲಿ ಶೇಕಡ 85ಕ್ಕಿಂತಲೂ ಹೆಚ್ಚಿನ ಪ್ರಮಾಣದ ಮೀನನ್ನು ಹಿಡಿಯುತ್ತಿವೆ.

1.4 2015–16 ನೇ ಸಾಲಿನಲ್ಲಿ ರೂ.1050.37 ಕೋಟಿ ಮೌಲ್ಯದ 84032 ಮೆಟ್ರಿಕ್ ಟನ್‌ಗಳಷ್ಟು ಕಡಲ ಉತ್ಪನ್ನಗಳನ್ನು ರಾಜ್ಯದಿಂದ ರಫ್ತು ಮಾಡಲಾಗಿದೆ.

1.5 "ಮೀನುಗಾರಿಕೆ ದೋಣಿಗಳಿಗೆ ಡೀಸೆಲ್– ಮಾರಾಟ ತೆರಿಗೆ ಮರುಪಾವತಿ" ಎಂಬ ಯೋಜನೆಯಲ್ಲಿ ಯಾಂತ್ರೀಕೃತ ದೋಣಿಗಳು ಮೀನುಗಾರಿಕೆಗೆ ಬಳಸಿದ ಡೀಸೆಲ್ ಮೇಲಿನ ಮಾರಾಟ ಕರಕ್ಕೆ ಸಮಾನವಾದ ಮೊತ್ತವನ್ನು ಸಹಾಯಧನವಾಗಿ ದೋಣಿ ಮಾಲೀಕರ ಬ್ಯಾಂಕು ಖಾತೆಗೆ ನೇರವಾಗಿ ವರ್ಗಾಯಿಸಲಾಗುತ್ತಿದೆ. 2016–17 ನೇ ಸಾಲಿನಲ್ಲಿ ರೂ.115.52 ಕೋಟಿಗಳ ಸಹಾಯಧನವನ್ನು 3459 ಮೀನುಗಾರಿಕೆ ದೋಣಿಗಳ ಮಾಲೀಕರಿಗೆ ನೀಡಲಾಗಿದೆ.

1.6 ಮತ್ಸ್ಯಾಶ್ರಯ ಯೋಜನೆಯಡಿ ಮೀನುಗಾರರ ಕುಟುಂಬಗಳಿಗೆ 4715 ಮನೆಗಳನ್ನು ನಿರ್ಮಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ. ಮನೆಗಳ ನಿರ್ಮಾಣವನ್ನು ಮುಂದುವರಿಸಲು ರೂ.26.28 ಕೋಟಿ ಅನುದಾನವನ್ನು ಯೋಜನೆ ಅನುಷ್ಠಾನಗೊಳಿಸುವ ನೋಡಲ್ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ.

1.7 ಉತ್ತರ ಕರ್ನಾಟಕದಲ್ಲಿ ಮೀನುಗಾರಿಕೆ ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ "ನಿಜ ಶರಣ ಅಂಬಿಗರ ಚೌಡಯ್ಯ ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ" ನೋಂದಾಯಿಸಿ ರೂ.200.00 ಲಕ್ಷ ಅನುದಾನ ಒದಗಿಸಲಾಗಿದೆ.

1.8 ಮೀನುಗಾರರು ಮೀನುಗಾರಿಕೆ ಚಟುವಟಿಕೆ ಕೈಗೊಳ್ಳಲು ವಾಣಿಜ್ಯ ಬ್ಯಾಂಕ್‌ಗಳಿಂದ ಶೇ.2 ರ ಬಡ್ಡಿ ದರದಲ್ಲಿ ರೂ.50,000 ವರೆಗೆ ಸಾಲ ಪಡೆದು 24 ತಿಂಗಳುಗಳಲ್ಲಿ ಮರುಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ವ್ಯತ್ಯಾಸದ ಬಡ್ಡಿ ಮೊತ್ತವನ್ನು ಸರ್ಕಾರದಿಂದ ಮರುಪಾವತಿಸಲಾಗುತ್ತಿದೆ. 25,945

ಫಲಾನುಭವಿಗಳು ಯೋಜನೆಯ ಪ್ರಯೋಜನ ಪಡೆದಿದ್ದು ರೂ.6.96 ಕೋಟಿ ಬಡ್ಡಿ ವ್ಯತ್ಯಾಸವನ್ನು ಮರುಪಾವತಿಸಲಾಗಿದೆ.

1.9 ಹೊಸ ಮೀನುಗಾರಿಕೆ ದೋಣಿಗಳ ನಿರ್ಮಾಣಕ್ಕೆ ಸರ್ಕಾರದ ಆದೇಶ ಸಂಖ್ಯೆ ಪಸಂಮೀ 109 ಮೀಇಯೋ 2016 ದಿನಾಂಕ:21–11–2016 ರ ಷರತ್ತು ಮತ್ತು ನಿಬಂಧನೆಗಳಿಗೊಳಪಡಿಸಿ ಆದೇಶ ಹೊರಡಿಸಿದ ದಿನದವರೆಗೆ ಬಂದ ಎಲ್ಲಾ ಅರ್ಜಿಗಳನ್ನು ಪರಿಗಣಿಸಿ ನೀಡಲು ಅನುಮತಿ ನೀಡಲಾಗಿದೆ.

1.10 ಮೀನುಗಾರಿಕೆ ದೋಣಿಗಳ ನೋಂದಣಿ, ದೋಣಿಗಳು ಬಳಸುವ ಡೀಸೆಲ್ ಮೇಲಿನ ಮಾರಾಟ ಕರ ಮರುಪಾವತಿ ಯೋಜನೆಗಳನ್ನು ಮೀನುಗಾರರಿಗೆ ಸಹಾಯಕವಾಗುವಂತೆ ಶೀಘ್ರ ಹಾಗೂ ಸುಗಮವಾಗಿ ಅನುಷ್ಠಾನಗೊಳಿಸಲು ಸಹಾಯಕವಾಗುವಂತೆ ಉಡುಪಿ ಜಿಲ್ಲೆಯಲ್ಲಿ ಮೀನುಗಾರಿಕೆ ಉಪ ನಿರ್ದೇಶಕರ ಕಛೇರಿಯನ್ನು ಸ್ಥಾಪಿಸಲಾಗಿದೆ.

1.11 ಕರಾವಳಿಯ 12,400 ಮಹಿಳಾ ಮೀನು ಮಾರಾಟಗಾರರಿಗೆ ತಲಾ ರೂ.1000 ವೆಚ್ಚದಲ್ಲಿ ಏಪ್ರಾನ್, ಗ್ಲೌವ್ಸ್, ಫೈಬರ್ ಬುಟ್ಟಿ ಇತ್ಯಾದಿ ಸುರಕ್ಷತಾ ಸಲಕರಣೆಗಳನ್ನು ರೂ.100.00 ಲಕ್ಷ ವೆಚ್ಚದಲ್ಲಿ ವಿತರಿಸಲಾಗಿದೆ.


1.12 ಉಡುಪಿ ಜಿಲ್ಲೆಯ ಹಂಗಾರಕಟ್ಟೆ–ಕೋಡಿ ಬೆಂಗ್ರೆಯಲ್ಲಿ ಮೀನುಗಾರಿಕೆ ಬಂದರು ನಿರ್ಮಾಣಕ್ಕೆ ಮತ್ತು ಉತ್ತರ ಕನ್ನಡ ಜಿಲ್ಲೆಯ ತದಡಿಯಲ್ಲಿ ಮೀನುಗಾರಿಕೆ ಬಂದರನ್ನು ವಿಸ್ತರಿಸುವುದಕ್ಕಾಗಿ ಅಗತ್ಯ ಪೂರ್ವಭಾವಿ ಅಧ್ಯಯನಗಳನ್ನು ಕೈಗೊಳ್ಳಲು ಸರ್ಕಾರದ ಅನುಮೋದನೆ ನೀಡಲಾಗಿದೆ.

1.13 ಕರ್ನಾಟಕ ಕಡಲ ಮೀನುಗಾರಿಕೆ ಕಾಯ್ದೆಯ ಸೆಕ್ಷನ್ (ಡಿ) ರಲ್ಲಿ ನೀಡಿರುವ ಅಧಿಕಾರದನ್ವಯ ಕರ್ನಾಟಕ ರಾಜ್ಯದ 12 ನಾಟಿಕಲ್ ಮೈಲ್ ವರೆಗಿನ ಪ್ರದೇಶದಲ್ಲಿ ಬುಲ್ ಟ್ರಾಲಿಂಗ್ ಮೀನುಗಾರಿಕೆಯನ್ನು ನಿಷೇಧಿಸಲಾಗಿದೆ.

1.14 ಕರಾವಳಿಯಲ್ಲಿ ಮೀನುಗಾರಿಕೆ ಮಾಡುತ್ತಿರುವ 5 ವರ್ಷಕ್ಕಿಂತ ಹಳೆಯ ಮೀನುಗಾರಿಕೆ ದೋಣಿಗಳನ್ನು ಬದಲಾಯಿಸಲು ಮೀನುಗಾರರಿಗೆ ಅವಕಾಶ ಮಾಡಿ ಕೊಡಲಾಗಿದೆ. ಹಾಗೂ ಬದಲಾವಣೆ ನಿಯಮಗಳನ್ನು ಸರಳಗೊಳಿಸಲಾಗಿದೆ.

1.15 ಮೀನುಗಾರರು ಸಮುದ್ರದಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ/ ಅಪಘಾತದಿಂದ ಮರಣಹೊಂದಿದಲ್ಲಿ ಮಾತ್ರ ಅನ್ವಯಿಸುವಂತೆ ಮೀನುಗಾರರ ಸಂಕಷ್ಟ ಪರಿಹಾರ ನಿಧಿಯಿಂದ ನೀಡಲಾಗುವ ಪರಿಹಾರ ಮೊತ್ತವನ್ನು ದಿನಾಂಕ 01.08.2016 ರಿಂದ ಈಗಿರುವ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ.

1.13 **ಮೀನುಗಾರಿಕೆ ಇಲಾಖೆಯ ಆಡಳಿತ ರೂಪರೇಷೆ**




ಮೀನುಗಾರಿಕೆ ಇಲಾಖೆಯು ಮೀನುಗಾರಿಕೆ ಸಚಿವರ ಅಧಿಕಾರ ವ್ಯಾಪ್ತಿಯಲ್ಲಿರುತ್ತದೆ. ಸರ್ಕಾರದ ಹಂತದಲ್ಲಿ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆರವರು ಮುಖ್ಯಸ್ಥರಾಗಿರುತ್ತಾರೆ. ಮೀನುಗಾರಿಕೆ ಇಲಾಖೆಯ ಆಡಳಿತ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳು ಮೀನುಗಾರಿಕೆ ನಿರ್ದೇಶಕರ ನೇತೃತ್ವದಲ್ಲಿ ನಡೆಯುತ್ತಿವೆ. ನಿರ್ದೇಶಕರ ಸಹಾಯಕ್ಕಾಗಿ ನಿರ್ದೇಶನಾಲಯದಲ್ಲಿ ಇಬ್ಬರು ಜಂಟಿ ನಿರ್ದೇಶಕರು, ಒಬ್ಬರು ಉಪ ನಿರ್ದೇಶಕರು, ಒಬ್ಬರು ಮೀನುಗಾರಿಕೆ ಹಿರಿಯ ಸಹಾಯಕ ನಿರ್ದೇಶಕರು (ಆಡಳಿತ) ಹಾಗೂ 10 ಸಹಾಯಕ ನಿರ್ದೇಶಕರುಗಳು ಕಾರ್ಯನಿರ್ವಹಿಸುತ್ತಿದ್ದಾರೆ. 7 ಪ್ರಾಂತೀಯ ಉಪ ನಿರ್ದೇಶಕರು, 30 ಜಿಲ್ಲಾ ಮೀನುಗಾರಿಕೆ ಅಧಿಕಾರಿಗಳು ಹಾಗೂ 125 ತಾಲ್ಲೂಕು ಮಟ್ಟದ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಇಲಾಖೆಯಲ್ಲಿ ಒಟ್ಟು 1401 ವಿವಿಧ ವೃಂದದ ಹುದ್ದೆಗಳು ಮಂಜೂರಾಗಿದ್ದು 689 ಅಧಿಕಾರಿ ಮತ್ತು ಸಿಬ್ಬಂದಿ ಹುದ್ದೆಗಳು ಭರ್ತಿಯಾಗಿದ್ದು 711 ಹುದ್ದೆಗಳು ಖಾಲಿ ಇವೆ.

## 2. 2016–17 ರ ವಾರ್ಷಿಕ ಯೋಜನೆ:

2016–17 ನೇ ಸಾಲಿನಲ್ಲಿ ಒಟ್ಟು ರೂ.27224.50 ಲಕ್ಷಗಳ ರಾಜ್ಯ ಯೋಜನಾ ಅನುದಾನವನ್ನು ನೀಡಲಾಗಿತ್ತು. ಕೆಲವು ಯೋಜನೆಗಳಿಗೆ ಅಗತ್ಯತೆಗೆ ಅನುಗುಣವಾಗಿ ಹೆಚ್ಚುವರಿ ಅನುದಾನ ರೂ.3896.55 ಲಕ್ಷಗಳನ್ನು ನೀಡಲಾಗಿದೆ ಮತ್ತು ರೂ.400.00 ಲಕ್ಷ ಅನುದಾನ ಕಡಿತಗೊಳಿಸಲಾಗಿದೆ. ಹೀಗೆ ಮೀನುಗಾರಿಕೆ ಇಲಾಖೆಗೆ 2016–17 ನೇ ಸಾಲಿನಲ್ಲಿ ಒಟ್ಟು ರೂ.30721.05 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ. ವಿವರಗಳನ್ನು ಕೆಳಗಿನಂತೆ ನೀಡಲಾಗಿದೆ.

**(ರೂ.ಲಕ್ಷಗಳಲ್ಲಿ)**

| ವಿವರ | ರಾಜ್ಯದ ಪಾಲು | ಕೇಂದ್ರದ ಪಾಲು | ಒಟ್ಟು |
|---|---|---|---|
| **ರಾಜ್ಯ ವಲಯ ಯೋಜನೆಗಳು** | | | |
| ಅ) 2405–ಮೀನುಗಾರಿಕೆ | 19447.06 | 2490.99 | 21938.05 |
| ಆ) 4405–ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚ | 4922.00 | 2800.00 | 7722.00 |
| **ಒಟ್ಟು ರಾಜ್ಯ ವಲಯ** | **24369.06** | **5290.99** | **29660.05** |
| **ಜಿಲ್ಲಾ ಪಂಚಾಯತ್ ಯೋಜನೆಗಳು** | | | |
| ಅ) 2405–ಮೀನುಗಾರಿಕೆ | 1003.00 | 58.00 | 1061.00 |
| **ಒಟ್ಟು** | **25372.06** | **5348.99** | **30721.05** |

ಹೆಚ್ಚುವರಿ ಅನುದಾನ ಪಡೆದ ಯೋಜನೆಗಳ ವಿವರಗಳು ಕೆಳಗಿನಂತೆ ನೀಡಲಾಗಿದೆ.

| ಕ್ರ.ಸಂ | ಯೋಜನೆ | ಹೆಚ್ಚುವರಿ ಅನುದಾನ (ರೂ.ಲಕ್ಷ) |
|---|---|---|
| 1. | ಮೀನುಗಾರಿಕೆ ದೋಣಿಗಳಿಗೆ ಡೀಸೆಲ್–ಮಾರಾಟ ತೆರಿಗೆ ಮರುಪಾವತಿ | 2000.00 |
| 2. | ಕೇಂದ್ರ ಪುರಸ್ಕೃತ ಯೋಜನೆ ಅಂತರ್ವರ್ತಿ ಮೀನುಗಾರಿಕೆ ದೋಣಿಗಳ ಅಳವಡಿಕೆ | 449.79 |
| 3. | ಕೇಂದ್ರ ಪುರಸ್ಕೃತ ಯೋಜನೆ ನೀಲಿ ಕ್ರಾಂತಿ – ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ | 1370.75 |
| 4. | ಕೇಂದ್ರ ಪುರಸ್ಕೃತ ಯೋಜನೆ ಉಳಿತಾಯ ಮತ್ತು ಪರಿಹಾರ ಯೋಜನೆ | 76.01 |
| | **ಒಟ್ಟು** | **3896.55** |

2016–17 ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಮೀನುಗಾರಿಕೆ ಇಲಾಖೆಗೆ ಒಟ್ಟು ರೂ.3870.54 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ. ಇದಲ್ಲದೆ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರೂ.282.00 ಲಕ್ಷಗಳ ಅನುದಾನ ನೀಡಲಾಗಿದೆ.

**2016–17 ನೇ ಸಾಲಿನ ಆರ್ಥಿಕ ಪ್ರಗತಿಯ ಸಂಕ್ಷಿಪ್ತ ವಿವರಗಳನ್ನು ಈ ಕೆಳಗಿನಂತೆ ನೀಡಲಾಗಿದೆ.**

**ಆರ್ಥಿಕ ಪ್ರಗತಿ:**

(ರೂ.ಲಕ್ಷಗಳಲ್ಲಿ)

| ವಿವರ | ಅನುದಾನ | ಬಿಡುಗಡೆ | ವೆಚ್ಚ |
|---|---|---|---|
| **ರಾಜ್ಯ ವಲಯ ಯೋಜನೆಗಳು** | | | |
| ಅ) 2405–ಮೀನುಗಾರಿಕೆ | 21938.05 | 21663.25 | 20393.09 |
| ಆ) 4405–ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚ | 7722.00 | 6861.51 | 6718.15 |
| **ಒಟ್ಟು ರಾಜ್ಯ ವಲಯ** | **29660.05** | **28524.76** | **27111.24** |
| **ಜಿಲ್ಲಾ ಪಂಚಾಯತ್ ಯೋಜನೆಗಳು** | | | |
| ಅ) 2405–ಮೀನುಗಾರಿಕೆ | 1061.00 | 959.12 | 944.60 |
| **ಒಟ್ಟು** | **30721.05** | **29483.88** | **28055.84** |

**ಭೌತಿಕ ಪ್ರಗತಿ**

| | | **ಗುರಿ** | **ಸಾಧನೆ** |
|---|---|---|---|
| ಮೀನು ಉತ್ಪಾದನೆ | | | |
| ಒಳನಾಡು | ಲಕ್ಷ ಮೆ.ಟನ್ | 2.25 | 1.58 |
| ಕರಾವಳಿ | ಲಕ್ಷ ಮೆ.ಟನ್ | 3.80 | 3.99 |
| **ಒಟ್ಟು** | ಲಕ್ಷ ಮೆ.ಟನ್ | **6.05** | **5.57** |
| ಮೀನು ಮರಿ ಉತ್ಪಾದನೆ | | | |
| ಫ್ರೈ | ಮಿಲಿಯನ್ ಗಳಲ್ಲಿ | 708.00 | 499.88 |
| ಫಿಂಗರ್‌ಲಿಂಗ್ಸ್ | ಮಿಲಿಯನ್ ಗಳಲ್ಲಿ | 354.00 | 249.94 |

## 3. ಸಮುದ್ರ ಮೀನುಗಾರಿಕೆ

### 3.1 ಮೀನುಗಾರಿಕೆ ದೋಣಿಗಳಿಗೆ ಡೀಸೆಲ್–ಮಾರಾಟ ತೆರಿಗೆ ಮರುಪಾವತಿ (2405–00–103–0–23)

"ಮೀನುಗಾರಿಕೆ ದೋಣಿಗಳಿಗೆ ಡೀಸೆಲ್ – ಮಾರಾಟ ತೆರಿಗೆ ಮರುಪಾವತಿ" ಯೋಜನೆಯಡಿ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ಬಳಸುವ ರಾಜ್ಯ ಮಾರಾಟ ಕರಕ್ಕೆ ಸಮನಾದ ಮೊತ್ತವನ್ನು ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ಸಹಾಯಧನವಾಗಿ ನೇರವಾಗಿ ವರ್ಗಾಯಿಸಿ ಮರುಪಾವತಿ ಮಾಡಲಾಗುತ್ತದೆ. ಈ ಉದ್ದೇಶಕ್ಕಾಗಿ ರೂ.10050.00 ಲಕ್ಷ ಅನುದಾನ ನಿಗಧಿಯಾಗಿದ್ದು, ಹೆಚ್ಚುವರಿಯಾಗಿ ರೂ.2000.00 ಲಕ್ಷ ಒದಗಿಸಲಾಗಿರುತ್ತದೆ. ಡೀಸೆಲ್ ಮೇಲಿನ ಮಾರಾಟ ಕರ ಮರುಪಾವತಿಗೆ ಒಟ್ಟು ರೂ.11551.85 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 2016–17ನೇ ಸಾಲಿನಲ್ಲಿ 3549 ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ 1.09 ಲಕ್ಷ ಕಿಲೋ ಲೀಟರ್ ಡೀಸಲ್ ಒದಗಿಸಲಾಗಿದೆ.

ಈ ಮೊತ್ತದಲ್ಲಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ರೂ.598.00 ಲಕ್ಷಗಳನ್ನು ಒದಗಿಸಲಾಗಿತ್ತು. ಪರಿಶಿಷ್ಠ ಜಾತಿ ಮತ್ತು ಪಂಗಡಕ್ಕೆ ಸೇರಿದ ದೋಣಿ ಮಾಲೀಕರು ಕಡಿಮೆ ಇದ್ದ ಕಾರಣ ಅನುದಾನ ಉಳಿತಾಯವಾಗುವ್ವದರಿಂದ ಈ ಮೊತ್ತದಲ್ಲಿ ರೂ.498.00 ಲಕ್ಷಗಳನ್ನು ಕರಾವಳಿ ಜಿಲ್ಲೆಗಳಲ್ಲಿ ಎಫ್.ಆರ್.ಪಿ ಗಿಲ್ ನೆಟ್ ದೋಣಿ ಖರೀದಿ, ಮತ್ಸ್ಯಾಶ್ರಯ ಹಾಗೂ ಪಾತಿ ದೋಣಿ ಖರೀದಿ ಘಟಕಗಳಿಗೆ ಸಹಾಯಧನ ನೀಡಲು ನಿಗಧಿಪಡಿಸಿದ್ದು, ರೂ.495.97 ಲಕ್ಷ ವೆಚ್ಚ ಮಾಡಲಾಗಿದೆ. ಹೀಗೆ ಈ ಯೋಜನೆಯಲ್ಲಿ ಒಟ್ಟು ರೂ.12050.00 ಲಕ್ಷ ಅನುದಾನ ಒದಗಿಸಿದ್ದು, ರೂ.12047.82 ಲಕ್ಷ ವೆಚ್ಚ ಮಾಡಲಾಗಿದೆ.

### 3.2 ಮೀನುಗಾರಿಕೆ ಬಂದರುಗಳು – ಕೇಂದ್ರ ಪುರಸ್ಕೃತ ಯೋಜನೆ (4405–00–103–6–01):

ರೂ.57.60 ಕೋಟಿ ಅಂದಾಜು ವೆಚ್ಚದ ಮಂಗಳೂರು 3ನೇ ಹಂತ, ರೂ.37.15 ಕೋಟಿ ಅಂದಾಜು ವೆಚ್ಚದ ಮಲ್ಪೆ 3ನೇ ಹಂತ ಮತ್ತು ರೂ.26.98 ಕೋಟಿ ಅಂದಾಜು ವೆಚ್ಚದ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ಮೀನುಗಾರಿಕೆ ಬಂದರಿನ ಎರಡನೇ ಹಂತ, ರೂ.102.11 ಕೋಟಿ ಅಂದಾಜು ವೆಚ್ಚದ ಗಂಗೊಳ್ಳಿ ಮೀನುಗಾರಿಕೆ ಬಂದರಿನಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಮಂಜೂರಾತಿ ಪಡೆದು ಕಾಮಗಾರಿಗಳು ಪ್ರಗತಿಯಲ್ಲಿದೆ.

2016–17 ಸಾಲಿನಲ್ಲಿ ಈ ಕಾರ್ಯಕ್ರಮಕ್ಕೆ ರೂ.2500.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದೆ. ಸದರಿ ಯೋಜನೆಯಡಿ ರೂ.400.00 ಲಕ್ಷಗಳ ಕೇಂದ್ರದ ಪಾಲು ಕಡಿತಗೊಳಿಸಲಾಗಿದೆ. ಹಾಗೂ ರಾಜ್ಯದ ಪಾಲು ರೂ.33.33 ಲಕ್ಷ ಮರುಹೊಂದಾಣಿಕೆ ಮಾಡಿ ಒದಗಿಸಿ ಪರಿಷ್ಕೃತ ಅನುದಾನ ರೂ.2133.33 ಲಕ್ಷಗಳಾಗಿದ್ದು, ಪೂರ್ಣ ಅನುದಾನ ವೆಚ್ಚ ಮಾಡಲಾಗಿದೆ. ಕೇಂದ್ರ ಸರ್ಕಾರವು ಮಲ್ಪೆ ಮೀನುಗಾರಿಕೆ ಬಂದರಿಗೆ ರೂ.793.75 ಲಕ್ಷ, ಹಾಗೂ ಗಂಗೊಳ್ಳಿ ಮೀನುಗಾರಿಕೆ ಬಂದರಿಗೆ ರೂ.1000.00 ಲಕ್ಷ ಹೀಗೆ ಒಟ್ಟು ರೂ.1793.75 ಲಕ್ಷಗಳ ಕೇಂದ್ರದ ಪಾಲು ಬಿಡುಗಡೆ ಮಾಡಿದೆ.

### 3.3 ಮೀನುಗಾರಿಕೆ ಇಳಿದಾಣ ಮತ್ತು ತಂಗುದಾಣಗಳು (4405–00–104–0–02):

- ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನ ಶಿರೂರು ಅಳ್ವೆಗದ್ದೆಯಲ್ಲಿ ರೂ.980.00 ಲಕ್ಷಗಳ ವೆಚ್ಚದಲ್ಲಿ ತಡೆಗೋಡೆ, ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನ ಮರವಂತೆಯಲ್ಲಿ ರೂ.4500.00 ಲಕ್ಷಗಳ ವೆಚ್ಚದಲ್ಲಿ ಕೇರಳ ಮಾದರಿಯ ಬಾಹ್ಯ ಬಂದರು ನಿರ್ಮಾಣ, ಕೊಡೇರಿಯಲ್ಲಿ ರೂ.3300.00 ಲಕ್ಷ ವೆಚ್ಚದಲ್ಲಿ ತಡೆಗೋಡೆ ನಿರ್ಮಾಣ, ತೆಂಗಿನಗುಂಡಿಯಲ್ಲಿ ರೂ. 1000.00 ಲಕ್ಷಗಳಲ್ಲಿ ಮೀನುಗಾರಿಕೆ ಇಳಿದಾಣ ಕೇಂದ್ರದ ಧಕ್ಕೆ ವಿಸ್ತರಣೆ, ಕುಂದಾಪುರ ಕೋಡಿಯಲ್ಲಿ ರೂ. 400.00 ಲಕ್ಷ ವೆಚ್ಚದಲ್ಲಿ ಧಕ್ಕೆ ವಿಸ್ತರಣೆ ಮತ್ತು ಅಳ್ವೆಕೋಡಿಯಲ್ಲಿ ರೂ.500.00 ಲಕ್ಷ ವೆಚ್ಚದಲ್ಲಿ ಧಕ್ಕೆ ವಿಸ್ತರಣೆ ಕಾಮಗಾರಿ ಪ್ರಗತಿಯಲ್ಲಿದೆ.

- ಕೇಂದ್ರ ಪುರಸ್ಕೃತ ಯೋಜನೆಯಲ್ಲಿ ಆಮದಳ್ಳಿ ಮೀನುಗಾರಿಕೆ ಬಂದರಿನ ಕಾಮಗಾರಿಗಳನ್ನು ರೂ.1874.00 ಲಕ್ಷ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಕೇಂದ್ರ ಸರ್ಕಾರವು ಆಮದಳ್ಳಿ ಮೀನುಗಾರಿಕೆ ಬಂದರಿನ ನಿರ್ಮಾಣಕ್ಕಾಗಿ ರೂ.206.25 ಲಕ್ಷಗಳ ಕೇಂದ್ರದ ಪಾಲು ಬಿಡುಗಡೆ ಮಾಡಿದೆ.

ಈ ಯೋಜನೆಯಡಿ ಆಯವ್ಯಯದಲ್ಲಿ ರೂ.2476.00 ಲಕ್ಷಗಳ ಅನುದಾನ ಒದಗಿಸಲಾಗಿತ್ತು. ಸದರಿ ಮೊತ್ತದಿಂದ ರೂ.197.51 ಲಕ್ಷಗಳನ್ನು ಮರುಹೊಂದಾಣಿಕೆ ಮಾಡಿ ಪರಿಷ್ಕೃತ ಅನುದಾನ ರೂ.2278.49 ಲಕ್ಷಗಳಾಗಿರುತ್ತದೆ. ಈ ಪೈಕಿ ಸದರಿ ಯೋಜನೆಯಡಿ ಮಂಜೂರಾದ ಕಾಮಗಾರಿಗಳಿಗೆ ರೂ.1409.40 ಲಕ್ಷ ವೆಚ್ಚ ಮಾಡಲಾಗಿದೆ.

**3.4 ನಬಾರ್ಡ್ ನೆರವಿನ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಧಿ ಯೋಜನೆ (4405–00–800–2–03):**

ನಬಾರ್ಡ್ ನೆರವಿನ ಆರ್.ಐ.ಡಿ.ಎಫ್ ಯೋಜನೆಯಡಿ ಆರ್.ಐ.ಡಿ.ಎಫ್ 18, 19, 20 ಮತ್ತು 21 ರಲ್ಲಿ ಮಂಜೂರಾದ 38 ಕಾಮಗಾರಿಗಳಿಗೆ ರೂ.25.61 ಕೋಟಿ ವೆಚ್ಚ ಮಾಡಲಾಗಿದೆ. ಆರ್.ಐ.ಡಿ.ಎಫ್ 22 ರಡಿ ಮೀನುಗಾರಿಕೆ ಅಭಿವೃದ್ಧಿಗಾಗಿ 11 ಕಾಮಗಾರಿಗಳನ್ನು ರೂ.17.35 ಕೋಟಿ ವೆಚ್ಚದಲ್ಲಿ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ. ಉಡುಪಿ ಜಿಲ್ಲಯ ಬೊಬ್ಬರ್ಯಪಾದೆಯಲ್ಲಿ ಮೀನುಗಾರಿಕೆ ಜೆಟ್ಟಿ (ರೂ.2.00 ಕೋಟಿ), ಶಿರೂರು ಅಳ್ವೆಗದ್ದೆಯಲ್ಲಿ ಜೆಟ್ಟಿ (ರೂ.2.80 ಕೋಟಿ), ಸಾಸ್ತಾನದಲ್ಲಿ ಆಧುನಿಕ ಸುಸಜ್ಜಿತ ಮೀನು ಮಾರುಕಟ್ಟೆ (ರೂ.2.00 ಕೋಟಿ), ಉತ್ತರ ಕನ್ನಡ ಜಿಲ್ಲೆಯ ಬೆಳಕೆಯಲ್ಲಿ ಮೀನುಗಾರಿಕೆ ಇಳಿದಾಣ ಕೇಂದ್ರ (ರೂ.2.50 ಕೋಟಿ), ಸಸಿಹಿತ್ತಲಿನಲ್ಲಿ ಮೀನುಗಾರಿಕೆ ಜೆಟ್ಟಿ (ರೂ.1.00 ಕೋಟಿ) ಮತ್ತು ಶಿವಮೊಗ್ಗ ಜಿಲ್ಲೆಯ ಸಾಗರದಲ್ಲಿ ಸುಸಜ್ಜಿತ ಮೀನು ಮಾರುಕಟ್ಟೆ (ರೂ.2.50 ಕೋಟಿ) ಪ್ರಮುಖ ಕಾಮಗಾರಿಗಳಾಗಿರುತ್ತದೆ. 2016–17 ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾದ ರೂ.2561.00 ಲಕ್ಷಗಳ ಅನುದಾನವನ್ನ ಪೂರ್ಣವಾಗಿ ವೆಚ್ಚ ಮಾಡಲಾಗಿದೆ.

**3.5 ಮೀನುಗಾರಿಕೆ ಬಂದರುಗಳಲ್ಲಿ ಹೂಳೆತ್ತುವಿಕೆ–ಕೇಂದ್ರ ಪುರಸ್ಕೃತ ಯೋಜನೆ(4405–00–103–1–02):**

ರಾಜ್ಯದಲ್ಲಿ ಕೇಂದ್ರದ ನೆರವಿನೊಂದಿಗೆ ಹಾಗೂ ರಾಜ್ಯ ಯೋಜನೆಗಳಡಿಯಲ್ಲಿ ನಿರ್ಮಿಸಿರುವ ಮೀನುಗಾರಿಕೆ ಬಂದರು ಮತ್ತು ಇಳಿದಾಣ ಕೇಂದ್ರಗಳಲ್ಲಿ ಹೂಳಿನ ಸಮಸ್ಯೆಯನ್ನು ಬಗೆಹರಿಸಲು ಹೂಳೆತ್ತುವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಮಂಗಳೂರಿನ ಕಂಡತಪಳ್ಳಿಯಲ್ಲಿ ರೂ.453.40 ಲಕ್ಷಗಳ ವೆಚ್ಚದಲ್ಲಿ, ಕೋಡಿ ಬೆಂಗ್ರೆ ಹಂಗಾರಕಟ್ಟೆ ಹಾಗೂ ಭಟ್ಕಳದಲ್ಲಿ ರೂ.486.00 ಲಕ್ಷ ವೆಚ್ಚದಲ್ಲಿ, ಮಲ್ಪೆ ಉದ್ಯಾವರದಲ್ಲಿ ರೂ.550.00 ಲಕ್ಷಗಳ ಅಂದಾಜು ವೆಚ್ಚದಲ್ಲಿ, ಕೋಡಿಕನ್ಯಾನದಲ್ಲಿ ರೂ.646.00 ಲಕ್ಷ ಅಂದಾಜು ವೆಚ್ಚದಲ್ಲಿ, ಮಲ್ಪೆ ಬೇಸಿನ್ ನಲ್ಲಿ ರೂ.225.00 ಲಕ್ಷ ವೆಚ್ಚದಲ್ಲಿ, ಬೇಲೀಕೇರಿಯಲ್ಲಿ ರೂ.300.00 ಲಕ್ಷ ಅಂದಾಜು ವೆಚ್ಚದಲ್ಲಿ ಹಾಗೂ ಹೊನ್ನಾವರದ ಅಳಿವೆಯಲ್ಲಿ ರೂ.400.00 ಲಕ್ಷದಲ್ಲಿ ಹೂಳೆತ್ತುವ ಕಾಮಗಾರಿಗಳು ಪ್ರಗತಿಯಲ್ಲಿದೆ.

2016–17 ನೇ ಸಾಲಿನಲ್ಲಿ ಈ ಯೋಜನೆಯಡಿ ರೂ.400.00 ಲಕ್ಷ ಅನುದಾನ ಒದಗಿಸಲಾಗಿತ್ತು. ಪರಿಷ್ಕೃತ ಅನುದಾನ ರೂ.564.18 ಲಕ್ಷಗಳಾಗಿರುತ್ತದೆ. ಈ ಯೋಜನೆಯಡಿ ರೂ.429.42 ಲಕ್ಷಗಳನ್ನ ವೆಚ್ಚ ಮಾಡಲಾಗಿದೆ.

**3.6 ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆಯಡಿ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಪ್ರೆತ್ತ (4405–00–800–0–01)**

2016–17 ನೇ ಸಾಲಿನಲ್ಲಿ ಸದರಿ ಯೋಜನೆಯಡಿ ಒದಗಿಸಿದ ಅನುದಾನ ರೂ.185.00 ಲಕ್ಷಗಳನ್ನು ಮಂಜೂರಾದ ಕಾಮಗಾರಿಗಳಿಗೆ ಪೂರ್ಣವಾಗಿ ವೆಚ್ಚ ಮಾಡಲಾಗಿದೆ.

**3.7 ಮೀನುಗಾರಿಕೆ ಬಂದರು ಮತ್ತು ಇಳಿದಾಣ ಕೇಂದ್ರಗಳ ಅಭಿವೃದ್ಧಿ ಮತ್ತು ನಿರ್ವಹಣೆ(2405–00–103–0–14):**

ಮೀನುಗಾರಿಕೆ ಬಂದರುಗಳ ಮತ್ತು ಇಳಿದಾಣ ಕೇಂದ್ರಗಳ ನಿರ್ವಹಣೆ ಯೋಜನೆಯಲ್ಲಿನ ಅನುದಾನವನ್ನು ಮೀನುಗಾರಿಕೆ ಬಂದರುಗಳ ನಿರ್ವಹಣೆ, ಸ್ವಚ್ಛತೆ, ವಿದ್ಯುತ್, ಕುಡಿಯುವ ನೀರಿನ ಸರಬರಾಜು ವ್ಯವಸ್ಥೆಗೆ ಹಾಗೂ ಇತರೆ ದುರಸ್ತಿ ಕಾಮಗಾರಿಗೆ ಉಪಯೋಗಿಸಲು ಒದಗಿಸಲಾಗಿದೆ. 2016–17 ನೇ ಸಾಲಿನಲ್ಲಿ ರೂ.110.00 ಲಕ್ಷಗಳ ಅನುದಾನ ಒದಗಿಸಿದ್ದು ರೂ.112.81 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

### 3.8 ಅಂತರ್ವರ್ತಿ ಮೀನುಗಾರಿಕೆ ದೋಣಿಗಳಿಗೆ ಸಹಾಯ (2405-00-103-0-21)

ಈ ಕೇಂದ್ರ ಪುರಸ್ಕೃತ ಯೋಜನೆಯಡಿ ಇಂಟರ್ ಮೀಡಿಯೆಟ್ ದೋಣಿಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರದಿಂದ ಶೇ.10 ರಷ್ಟು ಗರಿಷ್ಠ ರೂ.6.00 ಲಕ್ಷಗಳ ಸಹಾಯಧನ ನೀಡಲಾಗುತ್ತದೆ. 2016-17 ನೇ ಸಾಲಿನಲ್ಲಿ ಈ ಯೋಜನೆಯಡಿ ರೂ.50.00 ಲಕ್ಷ ಅನುದಾನ ಒದಗಿಸಲಾಗಿರುತ್ತದೆ. ಕೇಂದ್ರ ಸರ್ಕಾರವು ಈ ಹಿಂದೆ ಮಂಜೂರು ಮಾಡಿದ 132 ಫಲಾನುಭವಿಗಳಿಗೆ ಎರಡನೇ ಕಂತಿನ ಸಹಾಯಧನ ರೂ.499.79 ಲಕ್ಷ ಅನುದಾನ ಬಿಡುಗಡೆ ಮಾಡಿದೆ. ಸದರಿ ಯೋಜನೆಗೆ ಹೆಚ್ಚುವರಿ ಅನುದಾನ ರೂ.449.79 ಲಕ್ಷಗಳನ್ನು ಸರ್ಕಾರದಿಂದ ಪಡೆಯಲಾಗಿದೆ. ಒಟ್ಟು ಅನುದಾನ ರೂ.499.79 ಲಕ್ಷಗಳನ್ನು ಪೂರ್ಣವಾಗಿ ವೆಚ್ಚ ಮಾಡಲಾಗಿದೆ.

### 3.9 ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುಚ್ಛಕ್ತಿಗೆ ಸಹಾಯಧನ (2405-00-110-0-03)

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳಿಗೆ ಉಪಯೋಗಿಸಿದ ವಿದ್ಯುತ್ ಯೂನಿಟ್‌ಗೆ ರೂ.1.50 ರಂತೆ ಪ್ರತಿ ಘಟಕಕ್ಕೆ ಗರಿಷ್ಟ ರೂ.3.00 ಲಕ್ಷದಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. 2016-17ನೇ ಸಾಲಿನಲ್ಲಿ ರೂ.400.00 ಲಕ್ಷ ಅನುದಾನ ಒದಗಿಸಲಾಗಿದ್ದು, ಪುನರ್ ವಿನಿಯೋಗದ ಮೂಲಕ ರೂ.234.73 ಲಕ್ಷಗಳನ್ನು ಹೆಚ್ಚುವರಿಯಾಗಿ ಪಡೆಯಲಾಗಿದೆ. ಪರಿಷ್ಕೃತ ಅನುದಾನ ರೂ.634.73 ಲಕ್ಷಗಳಾಗಿದ್ದು, ಈ ಮೊತ್ತದಲ್ಲಿ ರೂ.634.46 ಲಕ್ಷಗಳನ್ನು ಸಹಾಯಧನವಾಗಿ 194 ಮಂಜುಗಡ್ಡೆ ಸ್ಥಾವರಗಳಿಗೆ ನೀಡಲಾಗಿದೆ.

### 3.10 ಕರಾವಳಿ ಕೊಂಡಿ ರಸ್ತೆಗಳ ನಿರ್ವಹಣೆ (2405-00-800-0-15)

ರಾಜ್ಯದ ಕರಾವಳಿಯ ಮೂರು ಜಿಲ್ಲೆಗಳಲ್ಲಿ ಒಟ್ಟು 355.13 ಕಿಮೀ ಉದ್ದದ 218 ಮೀನುಗಾರಿಕೆ ಕೊಂಡಿ ರಸ್ತೆಗಳಿರುತ್ತವೆ. ಸದರಿ ಮೀನುಗಾರಿಕೆ ಕೊಂಡಿ ರಸ್ತೆಗಳ ದುರಸ್ತಿ, ಅಭಿವೃದ್ಧಿ ಮತ್ತು ನಿರ್ವಹಣೆಗೆ 2016-17 ನೇ ಸಾಲಿನಲ್ಲಿ ರೂ.400.00 ಲಕ್ಷಗಳನ್ನು ಒದಗಿಸಲಾಗಿರುತ್ತದೆ. 70 ರಸ್ತೆಗಳ ಅಭಿವೃದ್ಧಿಗಾಗಿ ಅನುದಾನ ರೂ.400.00 ಲಕ್ಷಗಳನ್ನು ಪೂರ್ಣವಾಗಿ ವೆಚ್ಚ ಮಾಡಲಾಗಿದೆ.

## 4. ಒಳನಾಡು ಮೀನುಗಾರಿಕೆ:

2016-17 ರಲ್ಲಿ ಇಲಾಖೆಯ ಮೀನುಮರಿ ಉತ್ಪಾದನಾ ಕೇಂದ್ರಗಳಲ್ಲಿ 4998.84 ಲಕ್ಷ ಫ್ರೈ ಮೀನು ಮರಿಗಳ ಉತ್ಪಾದನೆ ಮಾಡಲಾಗಿದೆ. 2657 ಇಲಾಖೆ ಕೆರೆಗಳಲ್ಲಿ 1307.94 ಲಕ್ಷ ಮೀನು ಮರಿಗಳನ್ನು ಮತ್ತು 1561 ಗ್ರಾಮ ಪಂಚಾಯತಿ ಕೆರೆಗಳಲ್ಲಿ 278.46 ಲಕ್ಷ ಮೀನು ಮರಿಗಳನ್ನು ದಾಸ್ತಾನು ಮಾಡಿ ಅಭಿವೃದ್ಧಿಪಡಿಸಲಾಗಿದೆ. ಸದರಿ ಸಾಲಿನಲ್ಲಿ 1.59 ಲಕ್ಷ ಮೆಟ್ರಿಕ್ ಟನ್ ಒಳನಾಡು ಮೀನು ಉತ್ಪಾದನೆಯಾಗಿದೆ.

### 4.1 ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ (2405-00-101-0-03):

ಈ ಯೋಜನೆಯಡಿ ನೀಡಲಾಗಿರುವ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ಫಾರಂಗಳಲ್ಲಿ ಹಾಗೂ ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ ಮೀನುಮರಿ ಪಾಲನೆಗೆ ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನು ಮರಿ ಸಾಗಾಣಿಕೆ ವಾಹನಗಳ ಖರೀದಿ, ಮೀನು ಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ನಿರ್ವಹಣೆ ಮತ್ತು ಸಿಬ್ಬಂದಿ ವೆಚ್ಚಗಳಿಗೆ ವಿನಿಯೋಗಿಸಲಾಗುತ್ತಿದೆ.

2016-17 ನೇ ಸಾಲಿನಲ್ಲಿ ಈ ಯೋಜನೆಯಡಿ ರೂ.322.00 ಲಕ್ಷಗಳನ್ನು ಒದಗಿಸಲಾಗಿದ್ದು, ರೂ.21.00 ಲಕ್ಷಗಳನ್ನು ಪುನರ್ ವಿನಿಯೋಗದ ಮೂಲಕ ಒದಗಿಸಿ ಪರಿಷ್ಕೃತ ಅನುದಾನ ರೂ.343.00 ಲಕ್ಷಗಳಾಗಿರುತ್ತದೆ. ರೂ.315.81 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

### 4.2 ಮೀನುಮರಿ ಖರೀದಿಗೆ ಸಹಾಯಧನ (2405–00–101–0–28)

ಈ ಯೋಜನೆಯಡಿ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/– ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/– ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಆಸಕ್ತರಿರುವ ಮೀನು ಕೃಷಿಕರು ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ. 2016–17 ನೇ ಸಾಲಿನಲ್ಲಿ ರೂ.30.00 ಲಕ್ಷ ಅನುದಾನವನ್ನು ಒದಗಿಸಿದ್ದು, ರೂ.28.06 ಲಕ್ಷಗಳನ್ನು ಸಹಾಯಧನವಾಗಿ ನೀಡಲಾಗಿದೆ. 485 ಫಲಾನುಭವಿಗಳು ಈ ಯೋಜನೆಯ ಪ್ರಯೋಜನ ಪಡೆದಿರುತ್ತಾರೆ.

### 4.3 ಜಲಾಶಯದಲ್ಲಿ ಮೀನು ಮರಿ ಬಿತ್ತನೆ (2405–00–101–0–54)

ರಾಜ್ಯದಲ್ಲಿ ಒಟ್ಟು 82 ಜಲಾಶಯಗಳಿವೆ. ಈ ಜಲಾಶಯಗಳ ಒಟ್ಟು ಜಲ ವಿಸ್ತೀರ್ಣ 2.72 ಲಕ್ಷ ಹೆಕ್ಟೇರ್‌ಗಳಾಗಿರುತ್ತದೆ. ಜಲಾಶಯಗಳನ್ನೇ ತಮ್ಮ ಜೀವನೋಪಾಯಕ್ಕೆ ನಂಬಿರುವ ಸಾವಿರಾರು ಮೀನುಗಾರರ ಕುಟುಂಬಗಳಿವೆ. ಇತ್ತೀಚಿನ ದಿನಗಳಲ್ಲಿ ನದಿಗಳಲ್ಲಿ ಮತ್ತು ಹಲವಾರು ಜಲಾಶಯಗಳಲ್ಲಿ ಮತ್ಸ್ಯ ಸಂಪನ್ಮೂಲಗಳು ಕ್ಷೀಣಿಸಿದ್ದು ಹೆಚ್ಚಿನ ಮೀನು ಶಿಕಾರಿಯಾಗದೆ ಇದನ್ನೇ ಅವಲಂಬಿಸಿರುವ ಮೀನುಗಾರರು ಸಂಕಷ್ಟದಲ್ಲಿದ್ದಾರೆ. ಜಲಾಶಯಗಳಲ್ಲಿ ಶೀಘ್ರವಾಗಿ ಬೆಳೆಯುವ ಭಾರತದ ದೊಡ್ಡಗೆಂಡೆ ಮೀನುಗಳಾದ ಕಾಟ್ಲಾ, ರೋಹು, ಮೃಗಾಲ ತಳಿಗಳು ದಕ್ಷಿಣ ಭಾರತದ ಜಲಸಂಪನ್ಮೂಲಗಳಲ್ಲಿ ಸ್ವಾಭಾವಿಕವಾಗಿ ಉತ್ಪಾದನೆಯಾಗುವುದಿಲ್ಲವಾದ್ದರಿಂದ ಅವುಗಳನ್ನು ಆಗಿಂದಾಗ್ಗೆ ದಾಸ್ತಾನು ಮಾಡುವ ಮೂಲಕ ಸದರಿ ಸಂಪನ್ಮೂಲಗಳಲ್ಲಿ ಮತ್ಸ್ಯ ಸಂಪನ್ಮೂಲ ವೃದ್ಧಿಗೊಳಿಸುವುದು ಅತ್ಯಗತ್ಯವಾಗಿದೆ.

ಈ ಯೋಜನೆಯಡಿ ರಾಜ್ಯದ ಆಯ್ದ ಜಲಾಶಯಗಳಲ್ಲಿ ಬಲಿತ ಮೀನು ಮರಿಗಳ ಬಿತ್ತನೆ ಮಾಡಿ ಜಲಾಶಯಗಳ ಅಭಿವೃದ್ಧಿ ಕೈಗೊಳ್ಳಲಾಗುತ್ತದೆ. 2016–17 ನೇ ಸಾಲಿನಲ್ಲಿ ಈ ಯೋಜನೆಯಡಿ ರೂ.102.00 ಲಕ್ಷಗಳನ್ನು ಒದಗಿಸಲಾಗಿದ್ದು, ರೂ.98.36 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 153.00 ಲಕ್ಷ ಬಿತ್ತನೆ ಮೀನು ಮರಿಗಳನ್ನು ಆಯ್ದ 19 ಜಲಾಶಯಗಳಲ್ಲಿ ಬಿತ್ತನೆ ಮಾಡಲಾಗಿದೆ.

### 4.4 ಒಳನಾಡು ಮೀನುಗಾರರಿಗೆ ಫೈಬರ್ ಗ್ಲಾಸ್ ಹರಿಗೋಲು ವಿತರಣೆ (2405–00–101–0–56)

ಮೀನುಗಾರರ ಶ್ರೇಯೋಭಿವೃದ್ಧಿ ಮತ್ತು ಅವರ ಜೀವರಕ್ಷಣೆಯ ದೃಷ್ಟಿಯಿಂದ ಮೀನುಗಾರಿಕೆ ಇಲಾಖೆಯು "ಒಳನಾಡು ಮೀನುಗಾರರಿಗೆ ಫೈಬರ್‌ಗ್ಲಾಸ್ ಹರಿಗೋಲುಗಳ ವಿತರಣೆ" ಎಂಬ ಕಾರ್ಯಕ್ರಮವನ್ನು ರೂಪಿಸಿದೆ. ಫೈಬರ್‌ಗ್ಲಾಸ್ ಹರಿಗೋಲುಗಳು ಸದೃಢವಾಗಿದ್ದು ಮೀನುಗಾರರು ಆಳನೀರಿನಲ್ಲಿ ಮೀನುಗಾರಿಕೆಯಲ್ಲಿ ತೊಡಗಲು ಹಾಗೂ ಜೀವ ರಕ್ಷಣೆ ದೃಷ್ಟಿಯಿಂದ ಸಹಕಾರಿಯಾಗಿರುವುದಲ್ಲದೆ ದೀರ್ಘ ಬಾಳಿಕೆಯನ್ನು ನೀಡುತ್ತವೆ. ಈ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಒಳನಾಡು ಪ್ರದೇಶಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ತಲಾ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ರೂ.10,000/– ಘಟಕ ವೆಚ್ಚದಲ್ಲಿ ನೀಡಲು ಅವಕಾಶ ಮಾಡಲಾಗಿದೆ. 2016–17 ನೇ ಸಾಲಿನಲ್ಲಿ ಈ ಯೋಜನೆಗೆ ರೂ.50.00 ಲಕ್ಷ ಅನುದಾನ ಒದಗಿಸಲಾಗಿದ್ದು, 637 ಮೀನುಗಾರರಿಗೆ ಸೌಲಭ್ಯ ನೀಡಲು ರೂ.46.60 ಲಕ್ಷ ವೆಚ್ಚ ಮಾಡಲಾಗಿದೆ.

### 4.5 ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ (2405–00–101–0–67)

ಉತ್ತರ ಕರ್ನಾಟಕದಲ್ಲಿ ಸುಮಾರು 1.64 ಲಕ್ಷ ಹೆಕ್ಟೇರ್ ವಿಸ್ತೀರ್ಣದ ಜಲಾಶಯಗಳು 42,195 ಹೆಕ್ಟೇರ್ ವಿಸ್ತೀರ್ಣದ ದೊಡ್ಡಕೆರೆಗಳು, 20667 ಹೆಕ್ಟೇರ್ ವಿಸ್ತೀರ್ಣದ ಗ್ರಾಮ ಪಂಚಾಯತ್ ಕೆರೆಗಳು, ನದಿಗಳು ಮತ್ತು ಕಾಲುವೆಗಳಿದ್ದು, ಒಳನಾಡು ಮೀನುಗಾರಿಕೆ ಅಭಿವೃದ್ದಿಗೆ ವಿಫುಲ ಅವಕಾಶವನ್ನು ನೀಡುತ್ತವೆ. ಈ ಹಿನ್ನೆಲೆಯಲ್ಲಿ ಇಲಾಖೆಯ ಅಧಿಕಾರಿಗಳನ್ನೊಳಗೊಂಡ "ನಿಜ ಶರಣ ಅಂಬಿಗರ ಚೌಡಯ್ಯ ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ದಿ" ಎಂಬ ಸಂಸ್ಥೆಯನ್ನು ಸ್ಥಾಪಿಸಲಾಗಿದೆ. ಈ ಸಂಸ್ಥೆಯ ಮುಖ್ಯ ಉದ್ದೇಶಗಳೆಂದರೆ: ಉತ್ತರ ಕರ್ನಾಟಕದ ಸಮಗ್ರ ಮೀನುಗಾರಿಕೆ ಅಭಿವೃದ್ದಿಗೆ ಸ್ಥಳೀಯ ಅಗತ್ಯತೆಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಠಾನಗೊಳಿಸುವುದು, ಅಗತ್ಯ ಯೋಜನಾ ವರದಿ ಸಿದ್ಧಪಡಿಸಿ ವಿವಿಧ ಮೂಲಗಳಿಂದ ಮೀನುಗಾರಿಕೆ ಚಟುವಟಿಕೆಗಳಿಗೆ ಅನುದಾನವನ್ನು ಪಡೆದು ಕಾರ್ಯಕ್ರಮ ಅನುಷ್ಠಾನಗೊಳಿಸುವುದು ಮತ್ತು ಮೀನುಗಾರಿಕೆ ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಅಭಿವೃದ್ದಿಯಲ್ಲಿ ನಿರತರಾಗಿರುವ ಸಂಸ್ಥೆಗಳು ಹಾಗೂ ಮೀನುಗಾರರ ಸಂಘಟನೆಗಳ ಸಹಯೋಗದೊಂದಿಗೆ ಉತ್ತರ ಕರ್ನಾಟಕದ ಮೀನುಗಾರಿಕೆ ಮತ್ತು ಮೀನು ಕೃಷಿ ಅಭಿವೃದ್ಧಿಗೆ ಕ್ರಮವಹಿಸುವುದು.

2016–17 ನೇ ಸಾಲಿನಲ್ಲಿ ಈ ಯೋಜನೆಯಡಿ ರೂ. 200.00 ಲಕ್ಷ ಅನುದಾನ ಒದಗಿಸಲಾಗಿದ್ದು ಪೂರ್ಣ ಅನುದಾನ ವೆಚ್ಚ ಮಾಡಲಾಗಿದೆ.

### 4.6 ಕ್ಲಸ ರ್ ಮಾದರಿಯಲ್ಲಿ ಮೀನುಗಾರಿಕೆ ಅಭಿವೃದ್ಧಿ (2405–00–101–0–68)

ಕ್ಲಸ್ಟರ್ ಮಾದರಿಯಲ್ಲಿ ಆಯ್ದ 14 ತಾಲ್ಲೂಕುಗಳಲ್ಲಿ ಸಮಗ್ರವಾಗಿ ಮತ್ತು ಸುಸಂಘಟಿತ ಮಾದರಿಯಲ್ಲಿ ಮೀನು ಕೃಷಿಯ ಅಭಿವೃದ್ಧಿಯನ್ನು ಕೈಗೊಳ್ಳುವುದು ಈ ಯೋಜನೆಯ ಉದ್ದೇಶ. ಈ ಯೋಜನೆಯಡಿ ಕೃಷಿಕರಿಗೆ ಮೀನು ಸಾಕಾಣಿಕೆ ಕೊಳ ಮತ್ತು ಇತರೆ ಮೂಲಭೂತ ಸೌಕರ್ಯಗಳ ಸೃಷ್ಠಿಗೆ ಸಹಾಯಧನ ನೀಡಲಾಗುವುದು. ಕ್ಲಸ ರ್ ಪ್ರದೇಶದಲ್ಲಿ ಕೃಷಿಗೆ ಅನುಪಯುಕ್ತವಾಗಿರುವ ಜೌಗು–ಚೌಳು ಪ್ರದೇಶಗಳಲ್ಲಿ ಮೀನು ಸಾಕಾಣಿಕೆಗೆ ಆದ್ಯತೆ ನೀಡಲಾಗುವುದು. 2016–17 ನೇ ಸಾಲಿನಲ್ಲಿ ಈ ಯೋಜನೆಯ ಅನುಷ್ಠಾನಕ್ಕಾಗಿ ರೂ.50.00 ಲಕ್ಷ ಅನುದಾನ ಒದಗಿಸಲಾಗಿದ್ದು, ರೂ.48.16 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 19.02 ಹೆಕ್ಟೇರ್ ಪ್ರದೇಶದಲ್ಲಿ ಕೊಳ ನಿರ್ಮಿಸಿ ಮೀನು ಕೃಷಿ ಕೈಗೊಳ್ಳಲು ಸಹಾಯಧನ ನೀಡಲಾಗಿದೆ.

### 4.7 ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ (2405–00–110–0–02)

"ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ" ಎಂಬ ಯೋಜನೆಯಡಿ ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಒಟ್ಟು ರೂ.10,000/– ಮೌಲ್ಯದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಶೇಕಡ 100ರಷ್ಟು ಸಹಾಯಧನ ನೀಡಲಾಗುವುದು. 2016–17 ನೇ ಸಾಲಿನಲ್ಲಿ ರೂ.103.00 ಲಕ್ಷಗಳ ಅನುದಾನವನ್ನು ಈ ಯೋಜನೆಗೆ ಒದಗಿಸಲಾಗಿದ್ದು 1028 ಫಲಾನುಭವಿಗಳಿಗೆ ಸಹಾಯಧನ ನೀಡಲು ರೂ.102.87 ಲಕ್ಷ ವೆಚ್ಚ ಮಾಡಲಾಗಿದೆ.

ಆಯವ್ಯಯ ಭಾಷಣದಲ್ಲಿ 10,000 ಮಹಿಳಾ ಮೀನು ಮಾರಾಟಗಾರರಿಗೆ ತಲಾ ರೂ.1000 ವೆಚ್ಚದಲ್ಲಿ ಏಪ್ರಾನ್, ಗ್ಲೌವ್ಸ್, ಫೈಬರ್ ಬುಟ್ಟಿ ಇತ್ಯಾದಿ ಸುರಕ್ಷತಾ ಸಲಕರಣೆಗಳನ್ನು ವಿತರಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ. ಸದರಿ ಘಟಕವನ್ನು ಈ ಯೋಜನೆಯಡಿ ಅಳವಡಿಸಿದ್ದು, ಇದಕ್ಕಾಗಿ ರೂ.100.00 ಲಕ್ಷಗಳನ್ನು ಮರುಹೊಂದಾಣಿಕೆ ಮೂಲಕ ಹೆಚ್ಚುವರಿಯಾಗಿ ಪಡೆದು 12,400 ಕರಾವಳಿ ಮಹಿಳೆಯರಿಗೆ ಸಲಕರಣೆಗಳನ್ನು ವಿತರಿಸಲಾಗಿದೆ. ಹೀಗೆ ಒಟ್ಟು ರೂ.203.00 ಲಕ್ಷಗಳ ಅನುದಾನದಲ್ಲಿ ರೂ.202.87 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

### 4.8 ಮೀನುಮರಿ ಉತ್ಪಾದನಾ ಕೇಂದ್ರಗಳ ನಿರ್ಮಾಣ ಮತ್ತು ಅಭಿವೃದ್ಧಿ (2405–00–800–0–29)

ಮೀನುಮರಿ ಉತ್ಪಾದನೆಯನ್ನು ಹೆಚ್ಚಿಸಲು ಮೀನುಮರಿ ಉತ್ಪಾದನಾ ಕೇಂದ್ರಗಳ ನಿರ್ಮಾಣ ಮತ್ತು ನಿರ್ವಹಣೆಗೆ ಅವಕಾಶ ಕಲ್ಪಿಸಲಾಗಿದೆ. 2016–17 ನೇ ಸಾಲಿನಲ್ಲಿ ರೂ.100.00 ಲಕ್ಷ ಅನುದಾನ ಒದಗಿಸಲಾಗಿರುತ್ತದೆ. ಈ ಮೊತ್ತದಿಂದ ರೂ.29.49 ಲಕ್ಷಗಳನ್ನು ಮರು ಹೊಂದಾಣಿಕೆ ಮಾಡಿ ಮೀನು ಮಾರುಕಟ್ಟೆ ನಿರ್ಮಾಣ ಯೋಜನೆಗೆ ನೀಡಿ ಪರಿಷ್ಕೃತ ಅನುದಾನ ರೂ.70.51 ಗಳ ಪೈಕಿ ರೂ.65.90 ಲಕ್ಷಗಳನ್ನು ಹೆಸರಘಟ್ಟ ಮೀನು ಮರಿ ಕೇಂದ್ರದ ಅಭಿವೃದ್ಧಿಗಾಗಿ ಉಪಯೋಗಿಸಲಾಗಿದೆ.

## 5. ಮೀನುಗಾರರ ಕಲ್ಯಾಣ ಯೋಜನೆಗಳು:

### 5.1 ಸಂಕಷ್ಟ ಪರಿಹಾರ ನಿಧಿ (2405–00–103–0–15):

ಮೀನುಗಾರಿಕೆ ಮಾಡುವಾಗ ಅಪಘಾತದಲ್ಲಿ ಮೃತಪಟ್ಟ ಪ್ರಕರಣಗಳಲ್ಲಿ ಮೃತರ ವಾರಸುದಾರರಿಗೆ ಅಥವಾ ಪೂರ್ಣ ಅಂಗವಿಕಲರಾದಲ್ಲಿ ಅವರಿಗೆ ಪರಿಹಾರ ನೀಡಲು ಮೀನುಗಾರರ ಸಂಕಷ್ಟ ಪರಿಹಾರ ನಿಧಿ ಸ್ಥಾಪಿಸಲಾಗಿದೆ. ಈ ಯೋಜನೆಯಡಿ ಮೀನುಗಾರರು ಮರಣ ಹೊಂದಿದ ಪ್ರಕರಣಗಳಲ್ಲಿ ರೂ.2.00 ಲಕ್ಷಗಳ ಪರಿಹಾರ ನೀಡಲಾಗುತ್ತದೆ. ಮೀನುಗಾರರು ಸಮುದ್ರದಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ/ ಅಪಘಾತದಿಂದ ಮರಣಹೊಂದಿದಲ್ಲಿ ಮೀನುಗಾರರ ಸಂಕಷ್ಟ ಪರಿಹಾರ ನಿಧಿಯಿಂದ ನೀಡಲಾಗುವ ಪರಿಹಾರ ಮೊತ್ತವನ್ನು ದಿನಾಂಕ 01.08.2016 ರಿಂದ ಈಗಿರುವ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಬಲೆಹಾನಿ, ದೋಣಿ ಹಾನಿ ಹಾಗೂ ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.25,000 ಗಳ ಪರಿಹಾರ ನೀಡಲಾಗುತ್ತದೆ.

2016–17ನೇ ಸಾಲಿನಲ್ಲಿ ಸದರಿ ಯೋಜನೆಯಡಿ ರೂ.25.00 ಲಕ್ಷಗಳನ್ನು ನಿಧಿಗೆ ಪಾವತಿಸಲಾಗಿದೆ. 82 ಮರಣ ಹೊಂದಿದ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. 3 ದೋಣಿಗಳಿಗೆ, 3 ಬಲೆ ನಷ್ಟಕ್ಕೆ ಪರಿಹಾರ ಹಾಗೂ 4 ಜನರ ವೈದ್ಯಕೀಯ ವೆಚ್ಚ ನೀಡಿದೆ. ಮೀನುಗಾರರಿಗೆ ಒಟ್ಟು ರೂ.155.99 ಲಕ್ಷ ಪರಿಹಾರ ನೀಡಲಾಗಿದೆ.

### 5.2 ಸಾಮೂಹಿಕ ಅಪಘಾತ ವಿಮಾ ಯೋಜನೆ (2405–00–120–0–07–106):

ಕೇಂದ್ರ ಪುರಸ್ಕೃತ ಸಾಮೂಹಿಕ ಅಪಘಾತ ವಿಮಾ ಯೋಜನೆಯಡಿಯಲ್ಲಿ ಮೀನುಗಾರರ ವಿಮಾ ಕಂತಿನ ಹಣ ತಲಾ ರೂ.20.27 ಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪ್ರತಿಶತ 50ರಂತೆ ಪ್ರತಿ ವರ್ಷ ದೆಹಲಿ ಯಲ್ಲಿರುವ ಮೀನುಗಾರಿಕೆ ಸಹಕಾರಿ ಸಂಘಗಳ ರಾಷ್ಟ್ರೀಯ ಮಹಾಮಂಡಳಿಗೆ (ಫಿಶ್ಕೋಫೆಡ್) ರಾಜ್ಯದ 2.05 ಲಕ್ಷ ಮೀನುಗಾರರಿಗೆ ವಿಮಾ ಸೌಲಭ್ಯ ಒದಗಿಸಲು ಪಾವತಿ ಮಾಡಲಾಗಿದೆ. 2016–17 ನೇ ಸಾಲಿನಲ್ಲಿ ಈ ರೂ.20.82 ಲಕ್ಷ ವಿಮಾ ಕಂತನ್ನು ರಾಜ್ಯ ಸರ್ಕಾರವು ಫಿಶ್ಕೋಫೆಡ್, ನವದೆಹಲಿಗೆ ಪಾವತಿಸಿದೆ. 2016–17 ನೇ ಸಾಲಿನಲ್ಲಿ ರೂ.93.00 ಲಕ್ಷದ ಪರಿಹಾರ ಮೊತ್ತವನ್ನು 49 ಪ್ರಕರಣಗಳಲ್ಲಿ ಇತ್ಯರ್ಥಗೊಳಿಸಲಾಗಿದೆ.

### 5.3 ಕೇಂದ್ರ ಸರ್ಕಾರದ ಮನೆಗಳ ನಿರ್ಮಾಣ ಯೋಜನೆ (2405–00–120–0–07–104):

ಈ ಯೋಜನೆಯಡಿ ಕೇಂದ್ರ ಸರ್ಕಾರವು ಮನೆಗಳ ನಿರ್ಮಾಣಕ್ಕಾಗಿ ರೂ.75,000 ಗಳ ಸಹಾಯಧನ ನೀಡಲು ಅವಕಾಶ ಮಾಡಿದೆ. ಸಹಾಯಧನವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಸಮವಾಗಿ ಭರಿಸಲಾಗುತ್ತದೆ. ಈ ಶೀರ್ಷಿಕೆಯಡಿ ಪ್ರಸಕ್ತ ಸಾಲಿನಲ್ಲಿ ಹುಡ್ಕೋ ಸಾಲ ಮರುಪಾವತಿ ಮಾಡಲಾಗುತ್ತಿದೆ. ರೂ.100.76 ಲಕ್ಷ ಸಾಲ ಮತ್ತು ಬಡ್ಡಿ ಮರುಪಾವತಿ ಮಾಡಲಾಗಿದೆ.

**5.4 ಕರಾವಳಿ ಮೀನುಗಾರರಿಗೆ ಕೇಂದ್ರ ಪುರಸ್ಕೃತ ಉಳಿತಾಯ ಮತ್ತು ಪರಿಹಾರ ಯೋಜನೆ (2405–00–120–0–07–100):**

ಸದರಿ ಯೋಜನೆಯಡಿಯಲ್ಲಿ ಮೀನುಗಾರಿಕೆ ಅವಧಿಯಲ್ಲಿ ಕರಾವಳಿ ಮೀನುಗಾರರಿಂದ ರೂ.900 ಗಳನ್ನು ವಸೂಲಿ ಮಾಡಲಾಗುತ್ತದೆ. ಈ ರೀತಿ ವಸೂಲಿ ಮಾಡಿದ ಮೊತ್ತ ರೂ.900 ಗಳಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ತಲಾ ರೂ.900 ಗಳನ್ನು ನೀಡಿ, ಹೀಗೆ ಸಂಗ್ರಹಿಸಿದ ಒಟ್ಟು ರೂ.2,700/–ಗಳನ್ನು ಮೀನುಗಾರಿಕೆ ಇಲ್ಲದ ಮೂರು ತಿಂಗಳಲ್ಲಿ ಮಾಸಿಕ ತಲಾ ರೂ.900 ಗಳನ್ನು ಮೀನುಗಾರರಿಗೆ ನೀಡಲಾಗುವುದು.

2016–17 ನೇ ಸಾಲಿನಲ್ಲಿ ಈ ಯೋಜನೆಯಡಿ ರೂ.731.00 ಲಕ್ಷಗಳ ಅನುದಾನ ಒದಗಿಸಲಾಗಿತ್ತು. ಹೆಚ್ಚುವರಿ ಅನುದಾನ ರೂ.76.01 ಲಕ್ಷಗಳು ಸೇರಿ ಪರಿಷ್ಕೃತ ಅನುದಾನ ರೂ.807.01 ಲಕ್ಷ ನೀಡಲಾಗಿರುತ್ತದೆ. ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿದ್ದ ರೂ.390.445 ಲಕ್ಷಗಳನ್ನು ಪುನರ್ ಮೌಲೀಕರಿಸಿ ರಾಜ್ಯದ ಪಾಲು ಸೇರಿ ರೂ.742.67 ಲಕ್ಷ ವೆಚ್ಚ ಮಾಡಲಾಗಿದೆ. 41,259 ಫಲಾನುಭವಿಗಳಿಗೆ ಪರಿಹಾರವನ್ನು ನೀಡಲಾಗಿದೆ.

**5.5 ಮತ್ಸ್ಯ ಆಶ್ರಯ ಯೋಜನೆ (2405–00–103–0–20)**

ಮೀನುಗಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲು ಮತ್ಸ್ಯಾಶ್ರಯ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳ ನಿರ್ಮಾಣಕ್ಕಾಗಿ ರೂ.1.20 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ. ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಫಲಾನುಭವಿಗಳಿಗೆ ರೂ.1.50 ಲಕ್ಷ ನೀಡಲಾಗುತ್ತಿದೆ. 2016–17 ನೇ ಸಾಲಿಗೆ 4715 ಮನೆಗಳನ್ನು ಹಂಚಿಕೆ ಮಾಡಲಾಗಿದೆ.

2016–17ನೇ ಸಾಲಿನಲ್ಲಿ ರೂ.3225.00 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ. ಈ ಮೊತ್ತದಲ್ಲಿ ರೂ.596.51 ಲಕ್ಷಗಳನ್ನು ವಾಣಿಜ್ಯ ಬ್ಯಾಂಕುಗಳ ಬಡ್ಡಿ ವ್ಯತ್ಯಾಸ ಮರುಪವತಿ ಯೋಜನೆಗೆ ವರ್ಗಾಯಿಸಿ ಪರಿಷ್ಕೃತ ಅನುದಾನ ರೂ.2628.49 ಲಕ್ಷಗಳನ್ನು ನೋಡಲ್ ಸಂಸ್ಥೆಯಾದ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ರವರಿಗೆ ಬಿಡುಗಡೆ ಮಾಡಲಾಗಿದೆ.

**5.6 ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ (2405–00–101–0–66)**

ಈ ಯೋಜನೆಯಡಿ ಮೀನುಗಾರಿಕೆ ಚಟುವಟಿಕೆಗಳಲ್ಲಿ ತೊಡಗಿರುವ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಕ್ಕೆ ಸೇರಿದ ಫಲಾನುಭವಿಗಳಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 2016–17 ನೇ ಸಾಲಿನಲ್ಲಿ ಈ ಯೋಜನೆಯಡಿ ಮೀನು ಕೊಳ ನಿರ್ಮಾಣ, ಹೂಡಿಕೆ ವೆಚ್ಚ, ಮೀನು ಮರಿ ಉತ್ಪಾದನೆಗೆ ಹ್ಯಾಚರಿ ನಿರ್ಮಾಣ, ಮೀನು ಮರಿ ಸಾಗಾಣಿಕೆ ವಾಹನ, ಮೀನು ಮರಿ ಪಾಲನೆಗೆ ಮೂಲಭೂತ ಸೌಲಭ್ಯ, ಮೀನಿ ಮರಿ (ಸ್ಪಾನ್) ಖರೀದಿ, ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ, ಮನೆಗಳ ನಿರ್ಮಾಣ ಹಾಗೂ ತರಬೇತಿ ಮತ್ತು ಶೈಕ್ಷಣಿಕ ಪ್ರವಾಸಕ್ಕೆ ಸಹಾಯ ನೀಡಲು ಅವಕಾಶ ಮಾಡಲಾಗಿದೆ. 2016–17 ನೇ ಸಾಲಿನಲ್ಲಿ ರೂ.459.00 ಲಕ್ಷಗಳ ಅನುದಾನ ನಿಗಧಿ ಪಡಿಸಲಾಗಿರುತ್ತದೆ. ಸದರಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ರೂ.454.21 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 50 ಹೆಕ್ಟೇರ್ ಪ್ರದೇಶದಲ್ಲಿ ಮೀನು ಕೃಷಿ ಕೈಗೊಳ್ಳಲಾಗಿದೆ ಹಾಗೂ 772 ಫಲಾನುಭವಿಗಳಿಗೆ ಸಹಾಯ ನೀಡಲಾಗಿದೆ.

**5.7 ವಿಶೇಷ ಘಟಕ ಉಪಯೋಜನೆ (2405–00–789–0–03)**

ಈ ಯೋಜನೆಯಡಿ ಮೀನುಗಾರಿಕೆ ಚಟುವಟಿಕೆಗಳಲ್ಲಿ ತೊಡಗಿರುವ ಪರಿಶಿಷ್ಠ ಜಾತಿಗೆ ಸೇರಿದ ಫಲಾನುಭವಿಗಳಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 2016–17 ನೇ ಸಾಲಿನಲ್ಲಿ ನಾಲ್ಕು

ಚಕ್ರವಾಹನ ಖರೀದಿ, ಮನೆಗಳ ನಿರ್ಮಾಣ ಹಾಗೂ ತರಬೇತಿ ಮತ್ತು ಶೈಕ್ಷಣಿಕ ಪ್ರವಾಸಕ್ಕೆ ಅವಕಾಶ ಮಾಡಲಾಗಿದೆ.

2016–17 ನೇ ಸಾಲಿನಲ್ಲಿ ರೂ.300.00 ಲಕ್ಷಗಳ ಅನುದಾನ ನಿಗಧಿ ಪಡಿಸಲಾಗಿರುತ್ತದೆ. ಸದರಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ರೂ.298.61 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 685 ಫಲಾನುಭವಿಗಳು ಈ ಯೋಜನೆಯ ಪ್ರಯೋಜನ ಪಡೆದಿರುತ್ತಾರೆ.

### 5.8 ಗಿರಿಜನ ಉಪಯೋಜನೆ (2405–00–790–0–00)

ಈ ಯೋಜನೆಯಡಿ ಮೀನುಗಾರಿಕೆ ಚಟುವಟಿಕೆಗಳಲ್ಲಿ ತೊಡಗಿರುವ ಪರಿಶಿಷ್ಠ ಪಂಗಡಕ್ಕೆ ಸೇರಿದ ಫಲಾನುಭವಿಗಳಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 2016–17 ನೇ ಸಾಲಿನಲ್ಲಿ ನಾಲ್ಕು ಚಕ್ರವಾಹನ ಖರೀದಿಗೆ ಅವಕಾಶ ಮಾಡಲಾಗಿದೆ. 2016–17 ನೇ ಸಾಲಿನಲ್ಲಿ ರೂ.40.00 ಲಕ್ಷಗಳ ಅನುದಾನ ನಿಗಧಿ ಪಡಿಸಲಾಗಿರುತ್ತದೆ. ಸದರಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ರೂ.39.32 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 9 ಫಲಾನುಭವಿಗಳು ಈ ಯೋಜನೆಯ ಪ್ರಯೋಜನ ಪಡೆದಿರುತ್ತಾರೆ.

## 6. ಸಂಸ್ಕರಣೆ, ಸಂರಕ್ಷಣೆ ಮತ್ತು ಮಾರಾಟ:

ರಾಜ್ಯದಲ್ಲಿನ ಮೀನುಗಾರಿಕೆ ವಲಯದಲ್ಲಿ ದಿನಂಪ್ರತಿ 5609 ಟನ್ನು ಮಂಜುಗಡ್ಡೆ ಉತ್ಪಾದನೆಯ ಸಾಮರ್ಥ್ಯವುಳ್ಳ 195 ಮಂಜುಗಡ್ಡೆ ಕಾರ್ಖಾನೆಗಳು, 2925 ಟನ್ನುಗಳ ದಾಸ್ತಾನು ಸಾಮರ್ಥ್ಯವುಳ್ಳ 49 ಶೀತಲಗೃಹಗಳು, 1255 ಟನ್ನು ದಾಸ್ತಾನು ಸಾಮರ್ಥ್ಯವುಳ್ಳ 11 ಘನೀಕೃತ ದಾಸ್ತಾನು ಮಳಿಗೆಗಳು, 175 ಟನ್ ಘನೀಕರಣ ಸಾಮರ್ಥ್ಯವುಳ್ಳ 14 ಘನೀಕರಣ ಘಟಕಗಳಿವೆ. ಅಲ್ಲದೆ 528.50 ಟನ್ ಸಾಮರ್ಥ್ಯವುಳ್ಳ 8 ಡಬ್ಬೀಕರಣ ಘಟಕಗಳು, ಹಾಗೂ 424.50 ಟನ್ ಸಾಮರ್ಥ್ಯವುಳ್ಳ 21 ಮೀನು ಹುಡಿ ಘಟಕಗಳಿವೆ.

ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಒಂದು ಮೀನುಗಾರಿಕೆ ಅಭಿವೃದ್ಧಿ ನಿಗಮ ಮತ್ತು ಎರಡು ಜಿಲ್ಲಾ ಸಹಕಾರಿ ಮೀನು ಮಾರಾಟ ಮಹಾಮಂಡಳಿಗಳು ಅಸ್ತಿತ್ವದಲ್ಲಿದ್ದು ಇವುಗಳು ಕೆಲವು ಬಂದರುಗಳಲ್ಲಿ ಮೀನುಗಾರರು ಹಿಡಿದು ತರುವ ಸೀಗಡಿ ಮತ್ತು ತಾಜಾ ಮೀನನ್ನು ಮಾರಾಟ ಮಾಡುತ್ತಿವೆ. ಮೀನುಗಾರರಿಗೆ ಬೇಕಾದ ಡೀಸಲ್, ಮೀನುಗಾರಿಕೆ ಸಲಕರಣೆ, ಬಿಡಿ ಭಾಗ, ಮುಂತಾದವುಗಳನ್ನು ಒದಗಿಸಿ ನಂತರ ಹಿಡಿದ ಮೀನನ್ನು ಅವರಿಂದ ಪಡೆದು ಮಾರಾಟ ಮಾಡಿ ಸಾಲವನ್ನು ವಾಪಸ್ಸು ಪಡೆದುಕೊಳ್ಳುವ ವ್ಯವಸ್ಥೆಯನ್ನು ಈ ಸಂಸ್ಥೆಗಳು ಅಳವಡಿಸಿಕೊಂಡಿವೆ.

### 6.1 ಮೀನು ಮಾರುಕಟ್ಟೆ ನಿರ್ಮಾಣಕ್ಕಾಗಿ ಸಹಾಯ (2405–00–105–0–09)

ರಾಜ್ಯದಲ್ಲಿ ಮೀನು ಮಾರುಕಟ್ಟೆಗಳಲ್ಲಿ ಸ್ವಚ್ಛತೆಯ ಕೊರತೆ ಇದೆ, ಆ ಕಾರಣಕ್ಕಾಗಿ ಸಾರ್ವಜನಿಕರು ಮಾರುಕಟ್ಟೆಗಳಿಗೆ ತೆರಳಿ ಮೀನು ಖರೀದಿಸಲು ಹಿಂಜರಿಯುತ್ತಾರೆ. ಆದುದರಿಂದ ಸ್ವಚ್ಛವಾದ ಮೀನು ಮಾರುಕಟ್ಟೆಗಳನ್ನು ನಿರ್ಮಿಸುವುದು ಅಗತ್ಯ. ಮೀನು ಮಾರುಕಟ್ಟೆಗಳನ್ನು ಸ್ಥಳೀಯ ಸಂಸ್ಥೆಗಳು ನಿರ್ಮಿಸಿ ನಿರ್ವಹಿಸುತ್ತಿದ್ದಾರೆ. ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ, ಹೈದರಾಬಾದ್ ರವರು ಮೀನುಮಾರುಕಟ್ಟೆಗಳ ನಿರ್ಮಾಣಕ್ಕಾಗಿ ಯೋಜನಾ ವೆಚ್ಚದ ಶೇ.50 ರಷ್ಟು ಸಹಾಯಧನವಾಗಿ ನೀಡಲು ಯೋಜನೆ ಹಮ್ಮಿಕೊಂಡಿರುತ್ತಾರೆ. ಈ ಹಿಂದೆ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಯಿಂದ ಶೇ.90 ರಷ್ಟು ಸಹಾಯ ನೀಡಲಾಗುತ್ತಿದ್ದು, ಸ್ಥಳೀಯ ಸಂಸ್ಥೆಗಳ ಸಹಾಯಕ್ಕಾಗಿ ಈ ಯೋಜನೆಯಡಿ ಶೇ.10 ರಷ್ಟಿನ ಮೊತ್ತ ಗರಿಷ್ಠ ರೂ.25.00 ಲಕ್ಷಗಳನ್ನು ರಾಜ್ಯ ಸರ್ಕಾರವು ಭರಿಸುತ್ತದೆ.

2016–17 ನೇ ಸಾಲಿನಲ್ಲಿ ಈ ಯೋಜನೆಯಡಿ ರೂ.30.00 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ. ರೂ.29.49 ಲಕ್ಷಗಳನ್ನು ಮರುಹೊಂದಾಣಿಕೆ ಮೂಲಕ ಒದಗಿಸಿದ್ದು, ರೂ.59.49 ಲಕ್ಷಗಳ ಪರಿಷ್ಕೃತ ಅನುದಾನ ಒದಗಿಸಲಾಗಿದೆ. ರೂ.59.49 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. ಈ ಮೊತ್ತವನ್ನು ದಕ್ಷಿಣ ಕನ್ನಡ ಜಿಲ್ಲೆಯ ಪಾಣಿ ಮಂಗಳೂರು, ಉಡುಪಿ ಜಿಲ್ಲೆಯ ಕೋಟ, ಶಿರ್ವ, ಕಿನ್ನಿಗೋಳಿ ಮಹಿಳಾ ಮೀನು ಮಾರುಕಟ್ಟೆ, ಮತ್ತು ಮೈಸೂರು ಜಿಲ್ಲೆಯ ಮಂಡಿಮೊಹಲ್ಲಾ, ಎನ್.ಆರ್. ಮೊಹಲ್ಲಾ, ದೇವರಾಜ ಮೀನು ಮಾರುಕಟ್ಟೆ ನಿರ್ಮಾಣಕ್ಕಾಗಿ ನೀಡಲಾಗಿದೆ.

**7. ಮೀನುಗಾರರ ಸಹಕಾರ ಸಂಘಗಳು:**

ರಾಜ್ಯದಲ್ಲಿ 612 ಮೀನುಗಾರಿಕೆ ಸಹಕಾರ ಸಂಘಗಳು ಅಸ್ತಿತ್ವದಲ್ಲಿದ್ದು, ಇವುಗಳಲ್ಲಿ 554 ಸಂಘಗಳು ಕಾರ್ಯಾಚರಣೆಯಲ್ಲಿದ್ದು 58 ಸಂಘಗಳು ಸ್ಥಗಿತಗೊಂಡಿರುತ್ತವೆ. ಇವುಗಳಲ್ಲದೆ ಕರಾವಳಿ ಜಿಲ್ಲೆಗಳಲ್ಲಿ ಎರಡು ಮೀನು ಮಾರಾಟ ಮಹಾಮಂಡಳಿಗಳು ಮತ್ತು ಒಳನಾಡಿನಲ್ಲಿ ಒಂದು ರಾಜ್ಯ ಮಟ್ಟದ ಮಹಾಮಂಡಳಿ ಕಾರ್ಯಾಚರಣೆಯಲ್ಲಿವೆ. ಈ ಸಹಕಾರ ಸಂಘಗಳ ಕಾರ್ಯ ಚಟುವಟಿಕೆಗಳನ್ನು ಅಭಿವೃದ್ಧಿಪಡಿಸಲು ಪಾಲು ಬಂಡವಾಳ ನೀಡುವಿಕೆ, ಸಲಕರಣೆ ಸಾಲ, ವ್ಯವಸ್ಥಾಪಕ ಸಹಾಯಧನ ನೀಡುವಿಕೆ, ಮುಂತಾದ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ. ಮೀನುಗಾರಿಕೆ ಸಹಕಾರ ಸಂಘಗಳಲ್ಲಿ ಒಟ್ಟು 2.05 ಲಕ್ಷ ಸದಸ್ಯರಿರುತ್ತಾರೆ.

**8. ಇತರೆ ಯೋಜನೆಗಳು:**

**8.1 ಸಂಶೋಧನೆ, ವಿಸ್ತರಣೆ, ಪ್ರದರ್ಶನ ಮತ್ತು ತರಬೇತಿ (2405–00–109–0–01):**

ಮೀನುಗಾರಿಕೆ ವಿಸ್ತರಣೆ ಕಾರ್ಯಕ್ರಮಗಳಾದ ಪ್ರಚಾರ, ಕಾರ್ಯಾಗಾರ, ಸಾಕ್ಷ್ಯಚಿತ್ರ ತಯಾರಿಕೆ, ಮತ್ಸ್ಯಮೇಳ ಏರ್ಪಡಿಸಲು, ಯೋಜನೆಗಳ ಮೌಲ್ಯಮಾಪನಾ ವೆಚ್ಚ, ತರಬೇತಿ, ಮೀನು ಕೃಷಿಕರ ದಿನಾಚರಣೆ, ಪಿಲಿಕುಳ ನಿಸರ್ಗಧಾಮದಲ್ಲಿ ಓಷನೇರಿಯಂ ಸ್ಥಾಪನೆ ಇತ್ಯಾದಿ 2016–17ನೇ ಸಾಲಿನಲ್ಲಿ ರೂ.662.50 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ. ಪಿಲಿಕುಳ ನಿಸರ್ಗಧಾಮದಲ್ಲಿ ಓಷನೇರಿಯಂ ಸ್ಥಾಪನೆ ಪ್ರಸ್ತಾವನೆ ಪರಿಗಣಿಸದೆ ಉಳಿಕೆಯಾದ ಮೊತ್ತವನ್ನು ವಿವಿಧ ಯೋಜನೆಗಳಿಗೆ ಪುನರ್ ವಿನಿಯೋಗ ಮಾಡಿ ರೂ.286.83 ಲಕ್ಷಗಳ ಪರಿಷ್ಕೃತ ಅನುದಾನ ಒದಗಿಸಲಾಗಿರುತ್ತದೆ. ಈ ಪೈಕಿ ರೂ.90.39 ಲಕ್ಷ ವೆಚ್ಚ ಮಾಡಲಾಗಿದೆ.

**8.2 ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು (2405–00–800–0–28):**

ಮೀನುಗಾರರು ಮೀನುಗಾರಿಕೆ ಚಟುವಟಿಕೆ ಕೈಗೊಳ್ಳಲು ವಾಣಿಜ್ಯ ಬ್ಯಾಂಕಿನಿಂದ ಶೇ.2 ರ ಬಡ್ಡಿ ದರದಲ್ಲಿ ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ. ವಾಣಿಜ್ಯ ಬ್ಯಾಂಕುಗಳು ಮೀನುಗಾರರಿಗೆ ಸಾಲ ನೀಡಿದ ಪ್ರಯುಕ್ತ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಅವಕಾಶ ಕಲ್ಪಿಸಲಾಗಿದೆ. 2016–17 ನೇ ಸಾಲಿನಲ್ಲಿ ರೂ.100.00 ಲಕ್ಷ ಅನುದಾನ ಒದಗಿಸಲಾಗಿರುತ್ತದೆ. ಆದರೆ ಹೆಚ್ಚಿನ ಕ್ಲೇಮುಗಳಿದ್ದ ಕಾರಣ ರೂ.595.51 ಲಕ್ಷಗಳನ್ನು ಹೆಚ್ಚುವರಿಯಾಗಿ ಪುನರ್ ವಿನಿಯೋಗದಿಂದ ಪಡೆಯಲಾಗಿದೆ. 25,945 ಮೀನುಗಾರರ ಕ್ಲೇಮ್‌ಗಳಿಗೆ ರೂ.696.51 ಲಕ್ಷ ವೆಚ್ಚ ಮಾಡಲಾಗಿದೆ.

**8.3 ನೀಲಿ ಕ್ರಾಂತಿ – ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (2405–00–101–0–58)**

ಮೀನುಗಾರಿಕೆ ವಲಯದಲ್ಲಿ ಮುಂದಿನ ಐದು ವರ್ಷಗಳ ಅವಧಿಯಲ್ಲಿ ಮಹತ್ತರ ಬೆಳವಣಿಗೆ ತರುವ ಸಲುವಾಗಿ ಕೇಂದ್ರ ಸರ್ಕಾರವು ಕೇಂದ್ರ ಪುರಸ್ಕೃತ ನೀಲಿ ಕ್ರಾಂತಿ – ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಮತ್ತು ನಿರ್ವಹಣೆ (Blue Revolution: Integrated Development and Management of Fisheries)

ಎಂಬ ಮಹತ್ವಾಕಾಂಕ್ಷಿ ಯೋಜನೆಯನ್ನು ಜಾರಿಗೆ ತಂದಿದೆ. ಈ ಯೋಜನೆಯಡಿ ಮೀನುಗಾರಿಕೆ ವಲಯದ ಮತ್ತು ಮೀನುಗಾರರ ಸಾಮಾಜಿಕ ಮತ್ತು ಆರ್ಥಿಕ ಸರ್ವತೋಮುಖ ಅಭಿವೃದ್ಧಿಗಾಗಿ ಈ ಕೆಳಕಂಡ ವಿವಿಧ ಕಾರ್ಯಕ್ರಮಗಳನ್ನು ಅಳವಡಿಸಲಾಗಿದೆ.

1.ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ ಮತ್ತು ಅದರ ಚಟುವಟಿಕೆಗಳು
2.ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ
3.ಕರಾವಳಿ ಮೀನುಗಾರಿಕೆ, ಮೂಲಭೂತ ಸೌಲಭ್ಯ ಮತ್ತು ಹಿಡುವಳಿ ನಂತರದ ಕಾರ್ಯಾಚರಣೆಗಳ ಅಭಿವೃದ್ಧಿ
4.ಮೀನುಗಾರಿಕೆ ವಲಯದ ದತ್ತಾಂಶ ಮತ್ತು ಭೂಶಾಸ್ತ್ರ ಮಾಹಿತಿ ವ್ಯವಸ್ಥೆಯನ್ನು ಬಲಪಡಿಸುವುದು
5.ಮೀನುಗಾರಿಕೆ ವಲಯಕ್ಕೆ ಸಾಂಸ್ಥಿಕ ವ್ಯವಸ್ಥೆ
6.ಮಾನಿಟರಿಂಗ್, ಕಂಟ್ರೋಲ್ ಮತ್ತು ಸರ್ವೀಲೆನ್ಸ್ ಮತ್ತು ಇತರೆ ಅಗತ್ಯ ಆಧಾರಿತ ಅಳವಡಿಕೆಗಳು
7.ಮೀನುಗಾರರ ಕಲ್ಯಾಣಕ್ಕಾಗಿ ರಾಷ್ಟ್ರೀಯ ಯೋಜನೆ

2016–17 ನೇ ಸಾಲಿನಲ್ಲಿ ಈ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರದ ಪಾಲು ರೂ.1370.75 ಲಕ್ಷಗಳನ್ನು ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ. ಈ ಪೈಕಿ ರೂ.403.65 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

**8.4 ನಿರ್ದೇಶನ ಮತ್ತು ಆಡಳಿತ (2405–00–001–0–01)**

ಈ ಲೆಕ್ಕ ಶೀರ್ಷಿಕೆಯಡಿ ರಾಜ್ಯ ವಲಯ ಯೋಜನೆಯಡಿ ಮಂಜೂರಾದ ಕೇಂದ್ರ ಕಛೇರಿ ಹಾಗೂ ಇತರೆ ಕಛೇರಿಗಳ ಸಿಬ್ಬಂದಿ ವೆಚ್ಚ, ಅಭಿಯಂತರರ ಸಂಬಳ, ಗಣಕಯಂತ್ರ, ಫ್ಯಾಕ್ಸ್ ಯಂತ್ರ ಮತ್ತು ಇತರೆ ವಿದ್ಯುನ್ಮಾನ ಉಪಕರಣಗಳ ಅಳವಡಿಕೆ ಮತ್ತು ಅವುಗಳ ನಿರ್ವಹಣೆ, ವಾಹನ ಖರೀದಿ, ಇತ್ಯಾದಿ ವೆಚ್ಚವನ್ನು ಭರಿಸಲು ಅವಕಾಶ ಕಲ್ಪಿಸಲಾಗಿದೆ. ಈ ಯೋಜನೆಯಡಿ ಇಲಾಖೆಯ ಕಛೇರಿಗಳ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಆಧುನೀಕರಣ ಮತ್ತು ದುರಸ್ತಿ ಕೆಲಸಗಳನ್ನು ತೆಗೆದುಕೊಳ್ಳಲು, ಮತ್ಸ್ಯಾಲಯಗಳ ಕಾಮಗಾರಿಗಳು ಮತ್ತು ನಿರ್ವಹಣೆಗೆ ಬೇಕಾಗುವ ಸಲಕರಣೆಗಳನ್ನು ಮತ್ತು ಇತರೆ ಸಾಮಗ್ರಿಗಳನ್ನು ಖರೀದಿಸಲು, ಅವಕಾಶ ಕಲ್ಪಿಸಲಾಗಿದೆ. 2016–17 ನೇ ಸಾಲಿನಲ್ಲಿ ರೂ.150.00 ಲಕ್ಷ ಅನುದಾನ ಒದಗಿಸಲಾಗಿರುತ್ತದೆ, ಹಾಗೂ ರೂ.19.94 ಲಕ್ಷಗಳನ್ನು ಪುನರ್ ವಿನಿಯೋಗದಿಂದ ಒದಗಿಸಲಾಗಿರುತ್ತದೆ. ರೂ.132.53 ಲಕ್ಷ ವೆಚ್ಚ ಮಾಡಲಾಗಿದೆ.

**8.5 ಒಳನಾಡು ಮೀನುಗಾರಿಕೆ ಅಂಕಿ ಅಂಶಗಳು (ಕೇಂದ್ರ ವಲಯ ಯೋಜನೆ) (2405–00–101–0–06)**

ಈ ಲೆಕ್ಕ ಶೀರ್ಷಿಕೆಯಡಿ ಒಳನಾಡು ಮತ್ತು ಕರಾವಳಿ ಮೀನುಗಾರಿಕೆಯ ಅಂಕಿಅಂಶಗಳನ್ನು ಸಂಗ್ರಹಿಸಲು ಮಾದರಿ ವಿಧಾನಗಳನ್ನು ಅಭಿವೃದ್ಧಿ ಪಡಿಸಲು ಮಂಜೂರು ಮಾಡಿರುವ ಹುದ್ದೆಗಳ ಸಿಬ್ಬಂದಿ ವೆಚ್ಚ, ಗಣಕೀಕೃತ ಯಂತ್ರಗಳ ಖರೀದಿ, ಗಣತೀದಾರರ ನೇಮಕಕ್ಕೆ ಅವಕಾಶ ಕಲ್ಪಿಸಲಾಗಿದೆ. ಇದು ಕೇಂದ್ರ ವಲಯ ಯೋಜನೆಯಾಗಿದ್ದು ಪೂರ್ಣ ವೆಚ್ಚವನ್ನು ಕೇಂದ್ರ ಸರ್ಕಾರದಿಂದ ಭರಿಸಲಾಗುವುದು. 2016–17 ನೇ ಸಾಲಿನಲ್ಲಿ ರೂ.30.00 ಲಕ್ಷ ಅನುದಾನ ಒದಗಿಸಿದ್ದು, ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗದ ಪ್ರಯುಕ್ತ ವೆಚ್ಚ ಆಗಿರುವುದಿಲ್ಲ.

**8.6 ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ**

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 2016–17 ನೇ ಸಾಲಿನಲ್ಲಿ ರೂ.500.00 ಲಕ್ಷಗಳ ವೆಚ್ಚದಲ್ಲಿ ಮೀನು ಮಾರಾಟ ಜಾಲದ ವಿಸ್ತರಣೆ ಮತ್ತು ಆಧುನೀಕರಣ, ಕ್ಲಸ್ಟರ್ ಮಾದರಿಯಲ್ಲಿ ಮೀನುಗಾರರಿಗಾಗಿ ಸಮಗ್ರ ಜಲಕೃಷಿ ಅಭಿವೃದ್ಧಿ, ವಿಶೇಷ ಅಭಿವೃದ್ಧಿ ಯೋಜನೆ, ಒಳನಾಡು ಮೀನುಗಾರಿಕೆ ಹೆಚ್ಚಿಸಲು ನೆರವು

ಯೋಜನೆಯಡಿ ಸಲಕರಣೆ ಕಿಟ್ ಮತ್ತು ಹರಿಗೋಲು ವಿತರಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣ ಮತ್ತು ಪ್ರಮುಖವಾದ ಕೃಷಿಗೆ ಯೋಗ್ಯವಾದ ಮೀನು ತಳಿಗಳಿಂದ ಉತ್ತಮ ಮೀನು ಮರಿ ಉತ್ಪಾದನೆ ಕಾರ್ಯಕ್ರಮಗಳನ್ನು ಕೈಗೊಳ್ಳಲು ಮಂಜೂರಾತಿ ಪಡೆಯಲಾಗಿರುತ್ತದೆ. ಈ ಪೈಕಿ ರೂ.282.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಅಲ್ಲದೆ ಹಿಂದಿನ ಸಾಲಿನಲ್ಲಿ ಉಳಿಕೆಯಾದ ಮೊತ್ತ ರೂ.123.00 ಲಕ್ಷಗಳನ್ನು ಪುನರ್ ಮೌಲ್ಯೀಕರಣ ಮಾಡಿ ಇಲಾಖೆಗೆ ಬಿಡುಗಡೆ ಮಾಡಲಾಗಿರುತ್ತದೆ. ಈ ಯೋಜನೆಯಡಿ ಒಟ್ಟು ರೂ.402.02 ಲಕ್ಷ ವೆಚ್ಚ ಮಾಡಲಾಗಿದೆ.

**9. ಜಿಲ್ಲಾ ಪಂಚಾಯತ್ ಯೋಜನೆಗಳ ವಿವರ:**

**9.1 ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ (2405–00–101–0–27)**

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ. 2016–17 ನೇ ಸಾಲಿನಲ್ಲಿ ಸದರಿ ಯೋಜನೆಯಡಿ ರೂ.369.65 ಲಕ್ಷ ಅನುದಾನ ಒದಗಿಸಲಾಗಿದ್ದು, ರೂ.367.56 ಲಕ್ಷ ವೆಚ್ಚ ಮಾಡಲಾಗಿದೆ.

**9.2 ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ (2405–00–101–0–28):**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಅಂದರೆ ಗರಿಷ್ಠ ರೂ.30,000/– ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ರೂ.10,000.00 ಗಳ ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

ಸದರಿ ಯೋಜನೆಯ ಅನುಷ್ಠಾನಕ್ಕೆ 2016–17ನೇ ಸಾಲಿನಲ್ಲಿ ರೂ.386.45 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ. ಈ ಮೇಲಿನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಒಟ್ಟು ರೂ.375.99 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

### 9.3 ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ (2405-00-101-0-30)

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.2000 ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.10000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.35,000 ಗಳ ಸಹಾಯಧನವನ್ನು ಮೂರು ಅಥವಾ ನಾಲ್ಕು ಫಲಾನುಭವಿಗಳ ಒಂದು ಗುಂಪಿಗೆ ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

2016-17ನೇ ಸಾಲಿನಲ್ಲಿ ಈ ಯೋಜನೆಗಾಗಿ ರೂ.123.80 ಲಕ್ಷ ಆಯವ್ಯಯ ಒದಗಿಸಿದ್ದು, ರೂ.122.88 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 1643 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ.

### 9.4 ಪ್ರದರ್ಶನ ಮತ್ತು ತರಬೇತಿ (2405-00-101-0-32):

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು. 2016-17ನೇ ಸಾಲಿನಲ್ಲಿ ಪ್ರದರ್ಶನ ಮತ್ತು ತರಬೇತಿಗೆ ರೂ. 65.10 ಲಕ್ಷ ಅನುದಾನ ಒದಗಿಸಲಾಗಿದ್ದು ರೂ. 64.05 ಲಕ್ಷ ವೆಚ್ಚವಾಗಿದೆ.

### 9.5 ಕೇಂದ್ರ ಪುರಸ್ಕೃತ ಯೋಜನೆ: ಸಾಂಪ್ರದಾಯಿಕ ನಾಡದೋಣಿಗಳ ಮೋಟರೀಕರಣ ಯೋಜನೆ (2405-00-196-6-01) ಜಿಲ್ಲಾ ವಲಯ:

ಕೇಂದ್ರ ಪುರಸ್ಕೃತ ಸಾಂಪ್ರದಾಯಿಕ ದೋಣಿಗಳ ಮೋಟರೀಕರಣ ಯೋಜನೆಯನ್ನು ರಾಜ್ಯದಲ್ಲಿ 1987-88ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಇದುವರೆವಿಗೆ 3803 ನಾಡದೋಣಿಗಳನ್ನು ಮೋಟರೀಕರಣಗೊಳಿಸಲಾಗಿದೆ. ಈ ಯೋಜನೆಯಡಿ ಪ್ರತಿ ಔಟ್ ಬೋರ್ಡ್ ಮೋಟಾರಿಗೆ ಘಟಕ ವೆಚ್ಚದ ಶೇ.50 ರಷ್ಟು ಅಂದರೆ ಗರಿಷ್ಠ ರೂ.30,000/- ರಂತೆ ಸಹಾಯಧನ ನೀಡಲಾಗುತ್ತಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 50:50 ಅನುಪಾತದಲ್ಲಿ ಈ ಸಹಾಯಧನವನ್ನು ನೀಡುತ್ತಿವೆ. ಫಲಾನುಭವಿಗಳು ಉಳಿದ ಹಣವನ್ನು ಹಣಕಾಸು ಸಂಸ್ಥೆಗಳಿಂದ ಸಾಲದ ರೂಪದಲ್ಲಿ ಪಡೆಯಲು ಅವಕಾಶವಿದೆ. 2016-17 ನೇ ಸಾಲಿನಲ್ಲಿ ರೂ.116.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಕೇಂದ್ರ ಸರ್ಕಾರವು ಈ ಯೋಜನೆಯನ್ನು ನೀಲೀ ಕ್ರಾಂತಿ ಯೋಜನೆಗೆ ವಿಲೀನಗೊಳಿಸಿದ ಕಾರಣ 23 ದೋಣಿಗಳಲ್ಲಿ ಮೋಟರ್ ಅಳವಡಿಸಲು ರೂ.14.12 ಲಕ್ಷ ಅನುದಾನ ವೆಚ್ಚ ಮಾಡಲಾಗಿದೆ.

2016–17 ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತ್ ಯೋಜನೆಗಳ ಅನುಷ್ಠಾನದಲ್ಲಿ ಸಾಧಿಸಲಾದ ಆರ್ಥಿಕ ಪ್ರಗತಿಯನ್ನು ಕೆಳಗೆ ನಮೂದಿಸಲಾಗಿದೆ.

(ರೂ. ಲಕ್ಷಗಳಲ್ಲಿ)

| **ಯೋಜನೆ** | **ಅನುದಾನ** | **ವೆಚ್ಚ** |
|---|---|---|
| 1) ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ | 369.65 | 367.56 |
| 2) ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ | 386.45 | 375.99 |
| 3)ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ | 123.80 | 122.88 |
| 4) ಪ್ರದರ್ಶನಗಳು ಮತ್ತು ತರಬೇತಿ | 65.10 | 64.05 |
| 5) ಕೇಂದ್ರ ಪುರಸ್ಕೃತ– ಸಾಂಪ್ರದಾಯಿಕ ದೋಣಿಗಳ ಯಾಂತ್ರೀಕರಣ | 116.00 | 14.12 |
| **ಒಟ್ಟು** | **1061.00** | **944.60** |

## 10. ವೆಚ್ಚ ಮತ್ತು ಆದಾಯ:

2015–16 ಮತ್ತು 2016–17ನೇ ಸಾಲುಗಳಲ್ಲಿ ಇಲಾಖೆಯ ವಿವಿಧ ಯೋಜನೆಗಳಡಿ ಆಗಿರುವ ವೆಚ್ಚ ಮತ್ತು ಆದಾಯದ ವಿವರಗಳು ಕೆಳಕಂಡಂತಿವೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ. | **ಯೋಜನೆಗಳು** | **2015–16** | **2016–17** |
|---|---|---|---|
| **1** | **ರಾಜ್ಯ ಯೋಜನಾ ಕಾರ್ಯಕ್ರಮಗಳು** | | |
| (ಅ) | ರಾಜ್ಯ ವಲಯದ ಯೋಜನೆಗಳ ವೆಚ್ಚ | 17603.13 | 27111.24 |
| (ಆ) | ಜಿಲ್ಲಾ ಪಂಚಾಯತ್ ಯೋಜನೆಗಳ ವೆಚ್ಚ | 841.76 | 944.60 |
| 2 | ಯೋಜನೇತರ ವೆಚ್ಚ | 2779.00 | 2883.85 |
| 3 | ಆದಾಯ | 1609.33 | 1414.77 |

**ಮೀನುಗಾರಿಕೆ ನಿರ್ದೇಶಕರು**